ಸಂಪುಟ : 9 ಸಂಚಿಕೆ 32 ಪುಟ : 4 ಬೆಲೆ : 3.00 ಶನಿವಾರ ಮಾರ್ಚ್ 2, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 32 Pages : 4 Price : 3.00 Saturday March 2 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಾನೂನು, ಪ್ರವಾಸೋದ್ಯಮ ಇಲಾಖೆ ಸಚಿವರ ಪರಿಷ್ಕೃತ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಪರಿಷ್ಕೃತ ಪ್ರವಾಸ ಇಂತಿದೆ.

ಮಾರ್ಚ್ 2ರಂದು ಬೆಳಿಗ್ಗೆ 10.00 ಗಂಟೆಗೆ ನಗರದ ಕನಕ ಭವನದಲ್ಲಿ ಮಕ್ಕಳ ಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 10.30 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಸಂವಿಧಾನ ಮತ್ತು ಬಸವಣ್ಣನವರ ತತ್ವಗಳ ಪ್ರಸ್ತುತತೆ ಕುರಿತು ವಿಚಾರ ಸಂಕಿರಣ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11 ಗಂಟೆಗೆ ರಸ್ತೆ ಮೂಲಕ ರೋಣಕ್ಕೆ ಪ್ರಯಾಣಿಸಿ ರೋಣ ಮತ್ತು ಗಜೇಂದ್ರಗಡ ತಾಲೂಕು ಮಟ್ಟದ ಗ್ಯಾರಂಟಿ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

### ಶ್ರೀಮತಿ ಲಿಂಗಮ್ಮ ಮತ್ತು ಡಾ. ಚಿಕ್ಕಕೋಮಾರಿಗೌಡ ಹಾರೋಕೊಪ್ಪ ದತ್ತಿನಿಧಿ ಪ್ರಶಸ್ತಿ

## ಡಿ.ಆರ್. ಪಾಟೀಲರಿಗೆ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಕಸಾಪ ವತಿಯಿಂದ ಶ್ರೀಮತಿ ಲಿಂಗಮ್ಮ ಮತ್ತು ಡಾ. ಚಿಕ್ಕಕೋಮಾರಿಗೌಡ ಹಾರೋಕೊಪ್ಪ ದತ್ತಿನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಮಾ. 3ರಂದು ಮಧ್ಯಾಹ್ನ 12ಕ್ಕೆ ಜರುಗಲಿದೆ.

ಲೋಕ ಶಿಕ್ಷಣ ಧರ್ಮದರ್ಶಿ ಮಂಡಳಿಯ ಟ್ರಸ್ಟಿ, ಗದುಗಿನ ಮಾಜಿ ಶಾಸಕ ಡಿ.ಆರ್. ಪಾಟೀಲ ಅವರಿಗೆ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ಮುಖ್ಯ ನ್ಯಾಯಮೂರ್ತಿ ಪಿ.ಎಸ್. ದಿನೇಶಕುಮಾರ ಅವರು ಪ್ರಶಸ್ತಿ ಪ್ರದಾನ ಮಾಡುವರು.

ಗದಗ-ವಿಜಯಪುರ ರಾಮಕೃಷ್ಣ ವಿವೇಕಾನಂದಾಶ್ರಮದ ಅಧ್ಯಕ್ಷ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಕಸಾಪ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಸಂಸದ ಸಿ. ನಾರಾಯಣಸ್ವಾಮಿ, ಕರ್ನಾಟಕ ಪಂಚಾಯತ್‌ರಾಜ್ ಪರಿಷತ್‌ನ ಕೋಶಾಧ್ಯಕ್ಷ ಹಾಗೂ ದತ್ತಿ ದಾನಿಗಳಾದ ಡಾ. ಚಿಕ್ಕಕೋಮಾರಿಗೌಡ ಉಪಸ್ಥಿತರಿರುವರು ಎಂದು ಕಸಾಪ ಗೌರವ ಕಾರ್ಯದರ್ಶಿ ನೇ.ಭ. ರಾಮಲಿಂಗಶೆಟ್ಟಿ, ಡಾ. ಪದ್ಮಿನಿ ನಾಗರಾಜ, ಗೌರವ ಕೋಶಾಧ್ಯಕ್ಷ ಬಿ.ಎಂ. ಪಟೇಲಪಾಂಡು ತಿಳಿಸಿದ್ದಾರೆ.

ಡಿ.ಆರ್. ಪಾಟೀಲ ಅವರ ಅಭಿಮಾನಿಗಳು, ಹಿತೈಷಿಗಳು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

### ಗದ್ದಲವೆಬ್ಬಿಸಿದ ನಗರಸಭೆಯ ವಿಶೇಷ ಸಾಮಾನ್ಯ ಸಭೆ । ಸದಸ್ಯರ ನಡುವೆ ಮುಗಿಲು ಮುಟ್ಟಿದ ವಾಗ್ವಾದ

# ಒಮ್ಮತವಿಲ್ಲದೇ ವಿಶೇಷ ಸಭೆ ಮುಕ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಮಾಲೀಕತ್ವದಲ್ಲಿರವ ಆಸ್ತಿಗಳ ಕುರಿತ ಚರ್ಚೆಗಾಗಿ ಶುಕ್ರವಾರ ಕರೆದಿದ್ದ ವಿಶೇಷ ಸಾಮಾನ್ಯ ಸಭೆ, ಕಾಂಗ್ರೆಸ್ ಹಾಗೂ ಬಿಜೆಪಿ ಸದಸ್ಯರ ನಡುವಿನ ಕೆಸರೆರಚಾಟಕ್ಕೆ ಸಾಕ್ಷಿಯಾಯಿತು. ಸಾಮಾನ್ಯ ಸಭೆಯಲ್ಲಿ ಚರ್ಚೆಯ ವಿಷಯವೇ ಸ್ಪಷ್ಟವಾಗಿಲ್ಲ ಎನ್ನುವ ಕಾರಣಕ್ಕೆ ಪ್ರತಿಪಕ್ಷದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಆಡಳಿತ ಪಕ್ಷದ ಸದಸ್ಯರು ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ವಾಗ್ವಾದ ಮುಗಿಲು ಮುಟ್ಟಿತು. ಇದರ ನಡುವೆ ಸಭೆಯಲ್ಲಿ ಒಮ್ಮತದ ನಿರ್ಧಾರ ತಾಳಲು ಸಾಧ್ಯವಾಗದೇ ಸಭೆ ಮುಕ್ತಾಯ ಕಂಡಿತು.

ಸಭೆಯ ಆರಂಭದಲ್ಲಿಯೇ ಪ್ರತಿಪಕ್ಷ ನಾಯಕ ಎಲ್.ಡಿ. ಚಂದಾವರಿ ಮಾತನಾಡಿ, ವಿಶೇಷ ಸಾಮಾನ್ಯ ಸಭೆ ಕರೆದಿರುವುದು ಸೂಕ್ತ ನಿರ್ಧಾರವಾಗಿದ್ದರೂ ಯಾವ ವಿಷಯದ ಬಗ್ಗೆ ಚರ್ಚೆ ನಡೆಯುತ್ತದೆ ಎನ್ನುವುದು ಇನ್ನೂ ಸ್ಪಷ್ಟವಾಗಿಲ್ಲ. ಮುನ್ಸಿಪಲ್ ಕಾಯಿದೆ 1964ರ ಕಲಂ 48ರ ಪ್ರಕಾರ, ಸಾಮಾನ್ಯ ಸಭೆಯಲ್ಲಿ ಚರ್ಚೆಯ ವಿಷಯಗಳನ್ನು ಸ್ಪಷ್ಟವಾಗಿ ತಿಳಿಸಬೇಕು. ಆದರೆ ಇಲ್ಲಿ ನಗರಸಭೆ ಮಾಲಿಕತ್ವದ ಆಸ್ತಿಗಳ ಕುರಿತು ಚರ್ಚೆ ಎಂದಷ್ಟೇ ಉಲ್ಲೇಖಿಸಲಾಗಿದೆ. ನಗರಸಭೆ ಮಾಲೀಕತ್ವದಲ್ಲಿ ಸುಮಾರು 1 ಸಾವಿರ ಆಸ್ತಿಗಳಿದ್ದು, ಇಲ್ಲಿ ಯಾವ ಆಸ್ತಿ ಬಗ್ಗೆ ಚರ್ಚೆ ನಡೆಯಲಿದೆ? ನಗರಸಭೆಗೆ ಹೊಸದಾಗಿ ಸದಸ್ಯರು ಬಂದಿದ್ದಾರೆ. ಅವರಿಗೆ ಮಾಹಿತಿ ನೀಡದೆ ಚರ್ಚೆಗೆ ಆಹ್ವಾನಿಸಿದರೆ ಹೇಗೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

▸▸3ನೇ ಪುಟಕ್ಕೆ



ಆಡಳಿತ ಪಕ್ಷದ ಪರವಾಗಿ ಸದಸ್ಯ ಚಂದ್ರು ತಡಸದ ಮಾತನಾಡಿ, ಸರಕಾರ ನಗರಸಭೆ ಮಾಲೀಕತ್ವದ 34 ಎಕರೆ ವಕಾರಸಾಲು ಆಸ್ತಿಯನ್ನು ವಶಪಡಿಸಿಕೊಳ್ಳುವ ಹುನ್ನಾರ ನಡೆಸಿದೆ. ಈ ಆಸ್ತಿ ರಕ್ಷಣೆ ವಿಷಯ ಚರ್ಚೆಗೆ ಅವಕಾಶ ಕೊಡಿ ಎನ್ನುತ್ತಿದ್ದಂತೆ ವಾಗ್ವಾದಕ್ಕೆ ನಾಂದಿಯಾಯಿತು. ನೋಟಿಸ್‌ನಲ್ಲಿ ಆ ವಿಷಯವೇ ಇಲ್ಲದೆ ಚರ್ಚೆ ನಡೆಸುವುದು ಹೇಗೆ ಎಂದು ಪ್ರಶ್ನಿಸಿ ಸದನದ ಬಾವಿಗಿಳಿದು ಧರಣಿ ನಡೆಸಿ, ಪೌರಾಯುಕ್ತರು ಈ ವಿಚಾರವಾಗಿ ಸ್ಪಷ್ಟನೆ ಕೊಡಬೇಕು ಎಂದು ಕಾಂಗ್ರೆಸ್ ಸದಸ್ಯರು ಪಟ್ಟು ಹಿಡಿದರು.



#### ಅಧ್ಯಕ್ಷರಿಂದ ನಿರ್ಣಯ ಮಂಡನೆ

ಕಾಂಗ್ರೆಸ್ ಸದಸ್ಯರ ವರ್ತನೆಯಿಂದ ಬೇಸತ್ತ ಬಿಜೆಪಿ ಸದಸ್ಯರು ನಗರಸಭೆ ಆಸ್ತಿ ಗುಳುಂ ಮಾಡಿದ ಸಚಿವ ಎಚ್.ಕೆ. ಪಾಟೀಲರಿಗೆ ಧಿಕ್ಕಾರ ಕೂಗಿದರು. ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಸದಸ್ಯರು ಎಚ್.ಕೆ. ಪಾಟೀಲರಿಗೆ ಜೈಕಾರವನ್ನೂ ಕೂಗಿದರು.ಈ ನಡುವೆ ಮಧ್ಯಪ್ರವೇಶಿಸಿದ ನಗರಸಭಾಧ್ಯಕ್ಷೆ ಉಷಾ ದಾಸರ, ನಗರಸಭೆ ಮಾಲೀಕತ್ವದ ವಕಾರಸಾಲ ಆಸ್ತಿಯನ್ನು ಪ್ರಾಧಿಕಾರಕ್ಕೆ ವಹಿಸುವುದಿಲ್ಲ ಎನ್ನುವ ನಿರ್ಣಯ ಕೈಗೊಂಡರು. ಗದ್ದಲದ ಮಧ್ಯೆಯೂ ಆಡಳಿತ ಪಕ್ಷದ ಸದಸ್ಯರು ಕೈ ಎತ್ತಿ ತಮ್ಮ ಬೆಂಬಲ ಸೂಚಿಸುತ್ತಿದ್ದಂತೆ, ಅಧ್ಯಕ್ಷೆ ಉಷಾ ದಾಸರ ಸಭೆಯಿಂದ ನಿರ್ಗಮಿಸಿದರು.




### ಸರಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ಸಂಕನೂರ

# ಆರೋಗ್ಯ ಸಂಪತ್ತು ಅಮೂಲ್ಯವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರಿಗೂ ಆರೋಗ್ಯ ಸಂಪತ್ತು ಮುಖ್ಯವಾಗಿದೆ. ನೌಕರರು ತಮ್ಮ ಆರೋಗ್ಯ ಸಂರಕ್ಷಣೆಗೆ ಹೆಚ್ಚಿನ ಪ್ರಾಶಸ್ತ್ಯ ಕೊಟ್ಟು ಕ್ರೀಡೆಗಳಲ್ಲಿ ಪಾಲ್ಗೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹೇಳಿದರು.

ನಗರದ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಸಮಾರಂಭವನ್ನು ಕ್ರೀಡಾ ಧ್ವಜಾರೋಹಣ ನೆರವೇರಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ನೌಕರರು ದಿನನಿತ್ಯ ಕಚೇರಿ ಕೆಲಸ ನಿರ್ವಹಣೆಯಲ್ಲಿನ ಒತ್ತಡವನ್ನು ಕಡಿಮೆಗೊಳಿಸಲು ದಿವಸದ ಒಂದು ಗಂಟೆಯಾದರೂ ವ್ಯಾಯಾಮಕ್ಕಾಗಿಯೇ ಮೀಸಲಿಡಬೇಕು. ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವುದರಿಂದ ಒತ್ತಡದಿಂದ ಹೊರಬಂದು ಚೈತನ್ಯದಿಂದ ಕೆಲಸ ನಿರ್ವಹಿಸಲು ಸಹಾಯಕವಾಗುತ್ತದೆ ಎಂದು ನುಡಿದರು.

ಪ್ರಕೃತಿ ವಿಕೋಪದಂತಹ ಕೆಲವು ಸಂದರ್ಭದಲ್ಲಿಯೂ ಸಹ ಸರ್ಕಾರಿ ನೌಕರರು ತಮ್ಮ ಜೀವದ ಹಂಗು ತೊರೆದು ಕಾರ್ಯನಿರ್ವಹಿಸಿದ್ದು ಶ್ಲಾಘನೀಯ ಸಂಗತಿಯಾಗಿದೆ. ಆರೋಗ್ಯವಂತ ನಾಗರಿಕರಿಂದ ಮಾತ್ರ ಆರೋಗ್ಯವಂತ ದೇಶ ನಿರ್ಮಾಣ ಮಾಡಲು ಸಾಧ್ಯ. ಇತ್ತೀಚಿನ ದಿನಮಾನಗಳಲ್ಲಿ ಯುವ ಪೀಳಿಗೆ ಬಿ.ಪಿ, ಮಧುಮೇಹ, ಮಾನಸಿಕ ಒತ್ತಡ ಸೇರಿದಂತೆ ಅನೇಕ ಕಾಯಿಲೆಗಳಿಂದ ಬಳಲುತ್ತಿರುವುದು ವಿಷಾದನೀಯ ಸಂಗತಿ. ಸರ್ಕಾರಿ ನೌಕರರು ಪ್ರತಿನಿತ್ಯ ಯೋಗ, ಕ್ರೀಡೆಯನ್ನು ಹವ್ಯಾಸವಾಗಿಸಿಕೊಂಡು ಆರೋಗ್ಯದ ಕಡೆಗೆ ಗಮನ ಹರಿಸಬೇಕು ಎಂದು ಹೇಳಿದರು.

▸▸3ನೇ ಪುಟಕ್ಕೆ




ಯುವ ಸಬಲೀಕಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಕ್ರೀಡೆಯಲ್ಲಿ ಸೋಲು-ಗೆಲವು ಮುಖ್ಯವಲ್ಲ. ಪಾಲ್ಗೊಳ್ಳುವಿಕೆ ಮುಖ್ಯವಾಗಿದೆ. ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡೆಯಲ್ಲಿ ಪಾಲ್ಗೊಂಡು ಕ್ರೀಡಾ ಮನೋಭಾವ ಮೆರೆಯಬೇಕು ಎಂದು ತಿಳಿಸಿದರು.

### ಗ್ಯಾರಂಟಿ ಫಲಾನುಭವಿಗಳ ಸಮಾವೇಶದಲ್ಲಿ 15 ಸಾವಿರ ಆಸನಗಳ ವ್ಯವಸ್ಥೆ

## ಸಮಾವೇಶದ ಸ್ಥಳ ವೀಕ್ಷಿಸಿದ ಶಾಸಕ ಪಾಟೀಲ

■ವಿಜಯಸಾಕ್ಷಿ ಸುದ್ದಿ, ರೋಣ

ಮಾ.2ರಂದು ನಡೆಯುವ ಸರಕಾರದ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶದ ಸ್ಥಳಕ್ಕೆ ಶಾಸಕ ಜಿ.ಎಸ್. ಪಾಟೀಲ ಭೇಟಿ ನೀಡಿ ಪರಿಶೀಲಿಸಿ, ತಾಲೂಕಾ ಮಟ್ಟದ ಅಧಿಕಾರಿಗಳ ಜೊತೆ-ಗೆ ಚರ್ಚಿಸಿ ಅಗತ್ಯ ಮಾಹಿತಿಯನ್ನು ಪಡೆದುಕೊಂಡರು.

ಸಮಾವೇಶಕ್ಕೆ 20 ಸಾವಿರಕ್ಕೂ ಹೆಚ್ಚು ಫಲಾನುಭವಿಗಳು ಆಗಮಿಸುವ ನಿರೀ-ಕ್ಷೆ ಹೊಂದಲಾಗಿದೆ. ಈಗಾಗಲೇ ಬೃಹತ್ ಶಾಮಿಯಾನ್, 15 ಸಾವಿರ ಆಸನಗಳ ವ್ಯವಸ್ಥೆಯನ್ನು ಮಾಡಲಾಗಿದೆ. 18 ಊಟದ ಕೌಂಟರ್‌ಗಳನ್ನು ತೆರೆಯಲಾಗಿದ್ದು, ನಾಲ್ಕು ಕಡೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.

ಇನ್ನು ಬೃಹತ್ ಸಮಾವೇಶವನ್ನು ವೀಕ್ಷಿಸಲು ಎಲ್‌ಇಡಿ ಪರದೆಯ ವ್ಯವಸ್ಥೆಯನ್ನು ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳ ಮಹತ್ವವನ್ನು ಫಲಾನುಭವಿಗಳಿಗೆ ತಿಳಿಸಿಕೊಡಲು ನಾಲ್ಕು ಮಾಹಿತಿ ಕೇಂದ್ರಗಳನ್ನು ತೆರೆಯಲಾಗಿದ್ದು, ಗ್ಯಾರಂಟಿ ಯೋಜನೆಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸ್ಥಳದಲ್ಲಿ ಬೀಡು ಬಿಟ್ಟಿದ್ದಾರೆ. ವಾಹನ ನಿಲುಗಡೆಗೆ ಎಂಆರ್‌ಬಿಸಿ ಪ್ರವಾಸಿ ಮಂದಿರದ ಆವರಣ ಹಾಗೂ ಪಕ್ಕದಲ್ಲಿರುವ ಖಾಸಗಿ ಜಮೀನುಗಳಲ್ಲಿ ವ್ಯವಸ್ಥೆ ಮಾಡಲಾಗಿದೆ.

ತಹಸೀಲ್ದಾರ್ ನಾಗರಾಜ.ಕೆ., ಕಿರಣಕುಮಾರ ಕುಲಕರ್ಣಿ, ಇಓ ರವಿ ಎ.ಎನ್., ಡಿ ಮೋಹನ್, ಸಿಪಿಐ ಎಸ್.ಎಸ್. ಬಿಳಗಿ, ಮುಖಂಡರಾದ ದಶರಥ ಗಾಣಿಗೇರ, ಪರಶುರಾಮ ಅಳಗವಾಡಿ, ಯೂಸುಪ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಬಸವರಾಜ ನವಲಗುಂದ, ಸಂಗು ನವಲಗುಂದ, ಆನಂದ ಚಂಗಳಿ ಸೇರಿದಂತೆ ಅನೇಕ ಮುಖಂಡರಿದ್ದರು.



ಸಮಾವೇಶಕ್ಕೆ ಸಚಿವರಾದ ಹೆಚ್. ಕೆ. ಪಾಟೀಲ, ಲಕ್ಷ್ಮೀ ಹೆಬ್ಬಾಳ್ಕರ್, ಕೃಷ್ಣ ಭೈರೇಗೌಡ, ಸಂತೋಷ್ ಲಾಡ್, ಮುಖ್ಯ ಸಚೇತಕ ಸಲೀಂ ಅಹ್ಮದ, ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸೇರಿದಂತೆ ಶಾಸಕರು, ಮಾಜಿ ಶಾಸಕರು ಆಗಮಿಸಲಿದ್ದಾರೆ.

### ಸಮಾವೇಶದೊಂದಿಗೆ 129 ಕೋಟಿ ರೂ.ಗಳ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

## ಗ್ಯಾರಂಟಿ ಫಲಾನುಭವಿಗಳ ಸಮಾವೇಶ ಇಂದು


■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರಕಾರದ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದ ಜೊತೆಗೆ 129 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ ಕಾರ್ಯಕ್ರಮ ಮಾ.2ರಂದು ತಾಲೂಕಾ ಕ್ರೀಡಾಂಗಣದಲ್ಲಿ ಜರುಗಲಿದೆ ಎಂದು ಶಾಸಕ ಹಾಗೂ ರಾಜ್ಯ ಖನಿಜ ನಿಗಮದ ಅಧ್ಯಕ್ಷರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಆರ್.ಎಸ್. ಪಾಟೀಲ ಜಿನ್ನಿಂಗ್ ಕಂಪನಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಈಗಾಗಲೇ ರೋಣ ಮತಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಲಾಗಿದೆ. ಫಲಾನುಭವಿಗಳ ಸಮಾವೇಶದಂದು ರೋಣ-ಗಜೇಂದ್ರಗಡ ರಸ್ತೆಯ ಇಟಗಿ ಕ್ರಾಸ್ ಬಳಿ 120 ಕೋಟಿ ರೂ. ವೆಚ್ಚದಲ್ಲಿ 220/110 ಕೆ.ವ್ಹಿ.ನೂತನ ವಿದ್ಯುತ್ ವಿತರಣಾ ಕೇಂದ್ರದ ಶಂಕುಸ್ಥಾಪನೆ, ರೋಣ, ನರೆಗಲ್ಲ, ಗಜೇಂದ್ರಗಡ ಪಟ್ಟಣಗಳಲ್ಲಿ 3 ಕೋಟಿ ರೂ ವೆಚ್ಚದಲ್ಲಿ ಇಂದಿರಾ ಕ್ಯಾಂಟಿನ್ ನಿರ್ಮಾಣ, ಗಜೇಂದ್ರಗಡ ಇಂಗುಕರೆಯನ್ನು ಪ್ರವಾಸಿ ತಾಣವನ್ನಾಗಿಸಲು 6 ಕೋಟಿ ರೂ ವೆಚ್ಚದಲ್ಲಿ ಸಾಲುಮರ ತಿಮ್ಮಕ್ಕ ಸಸ್ಯೋದ್ಯಾನವನ್ನು ನಿರ್ಮಿಸಲಾಗುವುದು. ಗ್ಯಾರಂಟಿ ಫಲಾನುಭವಿಗಳ ಸಮಾವೇಶಕ್ಕೆ ಎರಡೂ ತಾಲೂಕುಗಳಿಂದ 25 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ ಎಂದರು.

ದಶರಥ ಗಾಣಿಗೇರ, ಪರಶುರಾಮ ಅಳಗವಾಡಿ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ, ಬಸವರಾಜ ನವಲಗುಂದ, ಶಫೀಕ ಮೂಗನೂರ, ಸಂಗು ನವಲಗುಂದ, ಆನಂದ ಚಂಗಳಿ, ದಾವಲಸಾಬ ಬಾಡಿನ, ಅಸ್ಲಂ ಕೊಪ್ಪಳ, ಮಲ್ಲು ರಾಯನಗೌಡ್ರ, ಸಂಜಯ ದೊಡ್ಡಮನಿ, ಗದಿಗೆಪ್ಪ ಕೊರೇಸೂರ ಸೇರಿದಂತೆ ಪುರಸಭೆಯ ಸದಸ್ಯರು ಹಾಗೂ ಮುಖಂಡರು ಉಪಸ್ಥಿತರಿದ್ದರು.



ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಎರಡು ತಿಂಗಳಲ್ಲಿ ಗ್ಯಾರಂಟಿ ಯೋಜನೆಗಳಿಗೆ ಚಾಲನೆ ನೀಡಿ ನುಡಿದಂತೆ ನಡೆದಿದ್ದೇವೆ. ಅಲ್ಲದೆ ಐದು ಗ್ಯಾರಂಟಿಗಳನ್ನು ಜಾರಿಗೆ ತಂದು ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ್ದು, ಫಲಾನುಭವಿಗಳ ಸಮಾವೇಶಕ್ಕೆ ಸಾಕ್ಷಿಯಾಗಿದೆ ಎಂದು ಜಿ.ಎಸ್. ಪಾಟೀಲ ನುಡಿದರು.

## ಸಂಪಾದಕೀಯ

# ಅರಣ್ಯ ಕೃಷಿಗೆ ಆದ್ಯತೆ ಸಿಗಲಿ

ಜಾಗತಿಕ ತಾಪಮಾನ ಜಗತ್ತಿನ ಬಹುದೊಡ್ಡ ಸಮಸ್ಯೆಯಾಗಿದೆ. ಅರಣ್ಯೀಕರಣದ ಕೊರತೆ ಜಾಗತಿಕ ತಾಪಮಾನ ಏರಿಕೆಗೆ ಕಾರಣ ಎನ್ನುವುದು ಅತ್ಯಂತ ಸ್ಪಷ್ಟವಾಗಿದೆ. ಹೀಗಾಗಿ ಅರಣ್ಯ ಬೆಳೆಸುವ ಪ್ರಯತ್ನಗಳು ಜಗತ್ತಿನ ಬೇರೆ ಬೇರೆ ದೇಶಗಳಲ್ಲಿ ಅತ್ಯಂತ ಗಂಭೀರವಾಗಿ ನಡೆಯುತ್ತಿದೆ.

ವಿಶೇಷವಾಗಿ ಆಫ್ರಿಕಾದಂತಹ ದೇಶಗಳು ಮಳೆ ನೀರನ್ನು ಹಿಡಿದಿಟ್ಟುಕೊಂಡು ಗಿಡ– ಮರಗಳನ್ನು ಬೆಳೆಸುವ ಕಾರ್ಯ ಆರಂಭಿಸಿದೆ. ಆ ಮೂಲಕ ಅರಣ್ಯ ಬೆಳೆಸುವುದು ಮಾತ್ರವಲ್ಲದೇ ಅಂತರ್ಜಲ ಹೆಚ್ಚಳವಾಗಿ ಭವಿಷ್ಯದಲ್ಲಿ ನೀರಿನ ಕೊರತೆ ಆಗದಂತೆ ಈಗಿನಿಂದಲೇ ಎಚ್ಚರಿಕೆಯ ಹೆಜ್ಜೆ ಇಡುತ್ತಿದೆ.

ಆದರೆ ನಮ್ಮ ದೇಶದಲ್ಲಿ ಮಾತ್ರ ಪರಿಸ್ಥಿತಿ ಇದಕ್ಕೆ ತದ್ವಿರುದ್ಧವಾಗಿದೆ. ಜಾಗತಿಕ ತಾಪಮಾನ ಕಡಿಮೆ ಮಾಡಲು ಅನೇಕ ದೇಶಗಳು ಅರಣ್ಯ ಬೆಳೆಸುತ್ತಿದ್ದರೆ ನಮ್ಮ ದೇಶದಲ್ಲಿ ಪ್ರತಿ ವರ್ಷ ಅರಣ್ಯ ಪ್ರದೇಶ ಕಡಿಮೆ ಆಗುತ್ತಲೆ ಇದೆ. ಅರಣ್ಯ ಬೆಳೆಸಬೇಕು, ಪರಿಸರ ರಕ್ಷಣೆ ಮಾಡಬೇಕು ಎನ್ನುವುದು ಭಾರತದಲ್ಲಿ ಭಾಷಣದ ವಸ್ತುವಾಗಿದೆ.

ಇನ್ನು ಕರ್ನಾಟಕದ ವಿಷಯಕ್ಕೆ ಬರುವುದಾದರೆ ಈ ವರ್ಷ ಬಿಸಿಲಿನ ಶಾಖ ಮತ್ತಷ್ಟು ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಅದರಲ್ಲೂ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಈ ಬಾರಿ ಬಿಸಿಲು ಮತ್ತಷ್ಟು ಪ್ರಖರವಾಗಲಿದೆ. ಸಾಮಾನ್ಯಕ್ಕಿಂತ ಹೆಚ್ಚು ತಾಪಮಾನ ಇರಲಿದೆ ಎನ್ನುವುದು ಹವಾಮಾನ ಇಲಾಖೆಯ ವರದಿ ಹೇಳಿದೆ.


ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಬಿಸಿಲು ಸರ್ವೆ ಸಾಮಾನ್ಯ ಅದರೆ. ಈ ಬಾರಿ ಹೆಚ್ಚಳ ಆಗಲಿದೆ ಎನ್ನುವುದು ಆತಂಕ ಮೂಡಿಸಿದೆ. ಬಿಸಿಲಿನ ಶಾಖ ಕಡಿಮೆ ಆಗಬೇಕಾದರೆ ಮತ್ತೆ ಅರಣ್ಯೀಕರಣ ಆಗಲೇಬೇಕು. ಉತ್ತರ ಕರ್ನಾಟಕದ ಅನೇಕ ಜಿಲ್ಲೆಗಳಲ್ಲಿ ಶೇ. 21 ಪ್ರದೇಶ ಅರಣ್ಯ ಪ್ರದೇಶ ಇರಬೇಕು. ಆದರೆ ಸದ್ಯ ಶೇ. 7ರಷ್ಟು ಮಾತ್ರ ಅರಣ್ಯವಿದೆ.

ಅರಣ್ಯ ಪ್ರದೇಶದ ಕೊರತೆ ಉತ್ತರದ ಶಾಖಕ್ಕೆ ಕಾರಣವಾಗಿದೆ. ಅರಣ್ಯ ಇಲಾಖೆ, ಸಾಮಾಜಿಕ ಅರಣ್ಯ ಇಲಾಖೆ ಅರಣ್ಯ ಬೆಳೆಸಲು ಕ್ರಮ ವಹಿಸುತ್ತಿವೆ. ಅದರ ಜೊತೆಗೆ ಕೃಷಿಕರು ಅರಣ್ಯ ಕೃಷಿಯತ್ತ ಮುಖ ಮಾಡಬೇಕು. ಅರಣ್ಯ ಕೃಷಿ ಒಂದೇ ಉತ್ತರದ ಬಿಸಿಲಿಗೆ ಉತ್ತರವಾಗಲು ಸಾಧ್ಯ. ಸರಕಾರ ಅರಣ್ಯ ಬೆಳೆಸುವ ಪ್ರಯತ್ನದ ಜೊತೆಗೆ ರೈತರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು.

### ಪುಟ್ಟರಾಜರ ಜನ್ಮಸ್ಥಳ ದೇವಗಿರಿಯಲ್ಲಿ ಆಯ್ಕೆ ಕಮ್ಮಾರರಿಗೆ 'ಸಾಹಿತ್ಯಶ್ರೀ' ಪ್ರಶಸ್ತಿ ಪ್ರದಾನ

# ಸಾಮರಸ ಕವಿಗೆ 'ಸಾಹಿತ್ಯಶ್ರೀ' ಗರಿಮೆ

ಶಿಕ್ಷಕರಾಗಿ, ಪತ್ರಕರ್ತರಾಗಿ, ಸಾಹಿತಿಗಳಾಗಿ, ಗ್ರಂಥಕಾರರಾಗಿ, ನಾಟಕಕಾರರಾಗಿ, ನಿರ್ದೇಶಕ– ನಟರಾಗಿ ಎಲ್ಲಾ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡು ಈ ಎಲ್ಲದರಲ್ಲೂ ಸಾಧನೆ ಮಾಡಿ ಸೈ ಎನಿಸಿಕೊಂಡಿರುವ ನೀಲಕಮಲ ಕಾವ್ಯನಾಮದ ಇಮಾಮಅಲಿ ಕಾಶಿಮಸಾಬ ಕಮ್ಮಾರ, ಸಾಹಿತ್ಯ ಪ್ರಿಯರ ಬಾಯಲ್ಲಿ ಆಯ್ಕೆ ಕಮ್ಮಾರ ಎಂದೇ ಪ್ರಸಿದ್ಧರು.



ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಹಿರೇವಡ್ಡಟ್ಟಿಯ ಕಾಶಿಮಸಾಬ ಹಾಗೂ ಮೋದಿನಬಿ ಪುಣ್ಯದಂಪತಿಗಳ ಉದರದಲ್ಲಿ ದಿ.22–07–1958ರಲ್ಲಿ ಜನಿಸಿದ ಕಮ್ಮಾರ ಸರ್ ತಮ್ಮ ಶೈಕ್ಷಣಿಕ ಜೀವನದಲ್ಲಿ ಎಲ್ಲರಿಗಿಂತಲೂ ಮುಂದಿದ್ದು, ಪ್ರಾಥಮಿಕ ಶಿಕ್ಷಣ ತಮ್ಮ ಸ್ವಗ್ರಾಮದಲ್ಲಿಯೇ ಮುಗಿಸಿ ನಂತರ ಮಾಧ್ಯಮಿಕ ಶಿಕ್ಷಣವನ್ನು ಅಣ್ಣಿಗೇರಿ ಮುಂಡರಗಿಯಲ್ಲಿ ಮುಗಿಸಿದರು. ಮುಂದೆ ಮೈಸೂರು ಮುಕ್ತ ವಿಶ್ವವಿದ್ಯಾಲಯದಿಂದ ಎಂ.ಎ. ಪತ್ರಿಕೋದ್ಯಮದಲ್ಲಿ ಉತ್ತೀರ್ಣರಾಗಿದ್ದಾರೆ. ತಮ್ಮ ಹುಟ್ಟೂರಿನ ಶಾಲೆಯಲ್ಲಿಯೇ ಗಣಿತ ಶಿಕ್ಷಕರಾಗಿ ಸೇವೆ ಸಲ್ಲಿಸಿದ್ದಾರೆ.

ಜಾತಿ, ಮತ, ಪಂಥ, ವರ್ಗ, ಮೇಲು–ಕೀಳುಗಳನ್ನು ಮರೆತ ಸಮಾನತೆಯ ಸಹಬಾಳ್ವೆಯ ಜೀವನ ಅವರದು. ಮಣಕವಾಡದ ಮಹಿಮಾ ಪುರುಷ ಶ್ರೀ ಗುರುಮೃತ್ಯುಂಜಯ ಗುರುಕುಲ ಆಶ್ರಮ ಕಟ್ಟಿರುವ ಇವರು ಪ್ರತಿ ಮಾಸಿಕ ಕೊನೆಯ ರವಿವಾರ ಆಧ್ಯಾತ್ಮ ಕುರಿತು ಚಿಂತನ ಕಾರ್ಯಕ್ರಮ ನಡೆಸುತ್ತಾರೆ. ಮಕ್ಕಳಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವದು ಇವರ ಹುಟ್ಟುಗುಣ.

ಶಿಕ್ಷಣ ತಜ್ಞರಾದ ಇವರು ಕಳೆದ 43 ವರ್ಷಗಳಿಂದ ಗೃಹ ಪಾಠ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಆಯ್ಕೆ ಕೋಚಿಂಗ್ ಸೆಂಟರ್ ಹೆಸರಿನಲ್ಲಿ ಕ್ಲಾಸ್‌ಗಳನ್ನು ಪ್ರಾರಂಭಿಸಿ ಬಡ ಮಕ್ಕಳಿಗೆ ಉಚಿತ ಟ್ಯೂಷನ್ ಹೇಳಿ ಅನೇಕ ಮಕ್ಕಳ ಬಾಳಿಗೆ ಜ್ಯೋತಿಯಾಗಿದ್ದಾರೆ. ಸರಳತೆ, ಅಷ್ಟೇ ಕಟ್ಟುನಿಟ್ಟಾದ ಶಿಸ್ತಿನ ಜೀವನಕ್ಕೆ ಬದುಕಿನ ಸೂತ್ರಗಳನ್ನು ಅಳವಡಿಸಿಕೊಂಡ ಅವರು ಎಲ್ಲದರಲ್ಲೂ ಒಳಿತನ್ನೇ ಕಾಣುವ, ಒಳಿತನ್ನೇ ಬಯಸುವ ಸ್ನೇಹಜೀವಿ. ಅವರ ಮನಸ್ಸು ವಿಶಾಲ, ಯಾವುದೇ ಮುಚ್ಚು ಮರೆ ಇಲ್ಲದೆ ನಿರ್ಭಿಡೆಯಿಯಿಂದ ಮಾತನಾಡಿ ತಮ್ಮೊಳಗಿನ ಅಂತರಂಗವನ್ನು ಬಿಚ್ಚಿಡುವ ಸ್ವಭಾವ ಅವರದು. ಅನ್ಯಾಯದ ಜೊತೆಗೆ ರಾಜಿಯಾಗದೆ ವಜ್ರಕ್ಕಿಂತ ಕಠೋರವಾಗುತ್ತಾರೆ. ನ್ಯಾಯದ ಪರ ಇದ್ದಾಗ ಹೂವಿಗಿಂತ ಮೃದುವಾಗುತ್ತಾರೆ.

ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಅವರ ಸಾಹಿತ್ಯ ಕೃಷಿಯಲ್ಲಿ ಪೂಜ್ಯ ಲಿಂ.ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ, ಪೂಜ್ಯ ಲಿಂ. ಮೃತ್ಯುಂಜಯ ಶರಣರ, ಪೂಜ್ಯ ಲಿಂ.ಸಿದ್ದಗಂಗಾ ಶಿವಕುಮಾರ ಮಹಾಸ್ವಾಮಿಗಳವರ ಕುರಿತು ಗ್ರಂಥ ಸೇರಿದಂತೆ ಸುಮಾರು 25ಕ್ಕೂ ಹೆಚ್ಚು ಗ್ರಂಥ ರಚಿಸಿದ್ದಾರೆ. ಇವರು ಕನ್ನಡ, ಹಿಂದಿ, ಇಂಗ್ಲಿಷ ಮತ್ತು ತೆಲುಗು ಭಾಷೆಗಳನ್ನು ಬಲ್ಲರು. ಕಮ್ಮಾರ ಗುರುಗಳ ಅಭಿಮಾನಿಗಳು, ಶಿಷ್ಯಂದಿರು, ಸ್ನೇಹಿತರು ಕಮ್ಮಾರರು 60ರ ಅಂಚಿನಲ್ಲಿದ್ದಾಗ ಅವರ ಕುರಿತು 'ಒಲುಮೆಯ ಆಯ್ಕೆ' ಎಂಬ ಅಭಿನಂದನಾ ಗ್ರಂಥ ಹೊರತಂದಿದ್ದಾರೆ.

ಪತ್ರಕರ್ತರಾಗಿ ಕೆಲಸ ನಿರ್ವಹಿಸುತ್ತಿರುವ ಸಮಯದಲ್ಲಿ ಅವರು ಯಾವುದೇ ಆಸೆ–ಆಮಿಷಕ್ಕೆ, ಮುಲಾಜಿಗೆ ಒಳಗಾಗದೆ ನೇರ ನಿಷ್ಠುರ ನಡೆನುಡಿಯ ವಸ್ತುನಿಷ್ಠ ವರದಿ ಮಾಡುವ ಮೂಲಕ ಪತ್ರಕರ್ತ ವೃತ್ತಿಗೆ ಗೌರವ ತಂದಿದ್ದಾರೆ.

ಮಣಕವಾಡದ ಲಿಂ. ಮೃತ್ಯುಂಜಯ ಅಪ್ಪನವರ ಪರಮ ಭಕ್ತರಾಗಿರುವ ಕಮ್ಮಾರ ಗುರುಗಳು 'ಮೃತ್ಯುಂಜಯ ಅಪ್ಪ ನನ್ನ ರಕ್ತದ ಕಣಕಣದಲ್ಲಿ ಇದ್ದಾರೆ' ಎಂದು ಹೇಳಿಕೊಳ್ಳುವ ಅವರ ಸ್ವಭಾವ ಮೆಚ್ಚುವಂತಿದೆ. ಮಣಕವಾಡ ಮಾಣಿಕ್ಯ, ಮಣಕವಾಡ ಸಿರಿ ಎಂಬ ಎರಡು ಪವಿತ್ರ ಗ್ರಂಥ ಲೋಕಾರ್ಪಣೆ ಮಾಡಿದ ಬಳಿಕ ಪೂಜ್ಯ ಮೃತ್ಯುಂಜಯ ಶರಣರ ಕೃಪಾ ಬಲದಿಂದ ಸದಾ ಪೂಜ್ಯರ ನಾಮಸ್ಮರಣೆ, ಆಧ್ಯಾತ್ಮಿಕ ಚಿಂತನೆ ಮಾಡುತ್ತ ಅವರ ದೈವದ ದಿಕ್ಕೇ ಬದಲಾಯಿತು. ಚಂದನ ಟಿವಿಯಲ್ಲಿ 'ತಾಯಿ' ಕುರಿತು ಉಪನ್ಯಾಸ ನೀಡಿ ಜನಮಾನಸದಲ್ಲಿ ಉಳಿದಿದ್ದಾರೆ. ಇವರ ಎಲ್ಲಾ ಕಾರ್ಯಗಳಿಗೆ ಅವರ ಶ್ರೀಮತಿ ರಜಿಯಾಬೇಗಂ ಹಾಗೂ ಮೂವರು ಮಕ್ಕಳಾದ ಆಲಂ, ಅಸ್ಲಂ, ಅಕ್ರಂ ಅವರು ಪ್ರೋತ್ಸಾಹ ನೀಡುತ್ತಿದ್ದಾರೆ. ವಿದ್ಯಾವಂತರಾದ ಅವರ ಮಕ್ಕಳು ಸಹ ಆದರ್ಶವನ್ನು ಮೈಗೂಡಿಸಿಕೊಂಡು ತಂದೆಯವರ ಹೆಸರು ಮತ್ತಷ್ಟು ರಾರಾಜಿಸುವಂತೆ ಮಾಡುತ್ತಿದ್ದಾರೆ.

ಈಗಾಗಲೇ ನಾಡಿನ ಹಲವಾರು ಸಂಘ, ಸಂಸ್ಥೆಗಳು ಇವರ ಪ್ರತಿಭೆ ಗುರುತಿಸಿ 'ಪುಟ್ಟರಾಜ ಸಾಹಿತ್ಯ ಪೋಷಕ', 'ಸಾಮರಸ ಕವಿ', 'ಶರಣ ಸಾಹಿತಿ', 'ಸಾಹಿತ್ಯ ಸುಧೆ', 'ಪತ್ರಿಕಾ ಶ್ರೀಗಂಧ' ಪ್ರಶಸ್ತಿ ಸೇರಿದಂತೆ ಹತ್ತು ಹಲವು ಪ್ರಶಸ್ತಿಗಳು ಕಮ್ಮಾರವರ ಸಾಧನೆಗೆ ಸಿಕ್ಕ ಪ್ರತಿಫಲ.

ಗದುಗಿನ ಗಾನ ಗಂಧರ್ವ ಕಲಾ ಟ್ರಸ್ಟ್ ಹಾಗೂ ದೇವಗಿರಿಯ ಡಾ.ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಸಂಗೀತ ಪಾಠಶಾಲೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಮಾರ್ಚ್ 3ರಂದು ದೇವಗಿರಿಯಲ್ಲಿ ಜರುಗಲಿರುವ ಸಮಾರಂಭದಲ್ಲಿ ಸಾಹಿತಿ ಆಯ್ಕೆ ಕಮ್ಮಾರ ಅವರಿಗೆ 'ಸಾಹಿತ್ಯಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಈ ಸಂದರ್ಭದಲ್ಲಿ ಆಯ್ಕೆ ಕಮ್ಮಾರ ಬರೆದ 'ಭೂಲೋಕದ ಭಗವಂತ' ಪವಿತ್ರ ಗ್ರಂಥ ಲೋಕಾರ್ಪಣೆಗೊಳ್ಳುವುದು. ಈ ಪುಣ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುಟ್ಟರಾಜರ ಕೃಪೆಗೆ ಪಾತ್ರರಾಗಬೇಕೆಂದು ನಮ್ಮ ಆಶಯ.

**– ಶಿವಶಂಕರಪ್ಪ ಡಿ.ಆರಟ್ಟಿ.**
ಹಿರೇಹಂದಿಗೋಳ, ಗದಗ.

# ದೇಸಿ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ, ಕೃಷಿ ವಿಶ್ವವಿದ್ಯಾಲಯ ಧಾರವಾಡ, ಕೃಷಿ ಇಲಾಖೆ ಗದಗ ಹಾಗೂ ಒಂಒಂಉಇ ಹೈದರಾಬಾದ್ ಇವರ ಸಂಯುಕ್ತಾಶ್ರಯದಲ್ಲಿ 2022–23ನೇ ಸಾಲಿನ ಗದಗ ಜಿಲ್ಲೆಯ ಕೃಷಿ ಪರಿಕರ ಮಾರಾಟಗಾರರಿಗೆ 40 ವಾರಗಳ ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೋಮಾ ಕೋರ್ಸ್ (ದೇಸಿ) ತರಬೇತಿ ಪಡೆದು ಉತ್ತೀರ್ಣರಾದ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ ವಿತರಣೆ ಹಾಗೂ 15 ದಿನಗಳ ಸಮಗ್ರ ಪೋಷಕಾಂಶ ನಿರ್ವಹಣೆ ಸರ್ಟಿಫಿಕೇಟ್ ಕೋರ್ಸಿನ (ಸಿ.ಸಿ.ಐ.ಎನ್.ಎಮ್) ಉದ್ಘಾಟನಾ ಸಮಾರಂಭ ಇತ್ತೀಚೆಗೆ ಹುಲಕೋಟಿಯಲ್ಲಿ ಜರುಗಿತು.

ಕೃಷಿ ವಿಶ್ವವಿದ್ಯಾಲಯ ಧಾರವಾಡದ ವಿಸ್ತರಣಾ ನಿರ್ದೇಶಕ ಡಾ. ಎಸ್. ಎಸ್. ಅಂಗಡಿ ಸಮಾರಂಭದ ಉದ್ಘಾಟಿಸಿ ಮಾತನಾಡಿದರು. ರಾಜ್ಯ ನೋಡಲ್ ಅಧಿಕಾರಿ(ದೇಸಿ) ಹಾಗೂ ಸಮೇತಿ(ಉತ್ತರ) ನಿರ್ದೇಶಕ ಡಾ. ಎಮ್.ಗೋಪಾಲ, ಗದಗ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿದರು.

ಎನ್.ಎಚ್. ಭಂಡಿ ಸ್ವಾಗತಿಸಿದರು. ಡಾ. ವಿನಾಯಕ ನಿರಂಜನ್ ಕಾರ್ಯಕ್ರಮ ನಿರೂಪಿಸಿದರು. ಎಸ್.ಕೆ. ಮುದ್ಲಾಪುರ ವಂದಿಸಿದರು.

# ಜಯಪ್ರಕಾಶ ಹೆಗಡೆ ವರದಿ ಸ್ವೀಕರಿಸದಂತೆ ಶ್ರೀ ರಂಭಾಪುರಿ ಜಗದ್ಗುರುಗಳ ಆಗ್ರಹ

■ವಿಜಯಸಾಕ್ಷಿ ಸುದ್ದಿ, ತುಮಕೂರು

ಬಹಳ ವರ್ಷಗಳ ನಂತರ ಜಯಪ್ರಕಾಶ ಹೆಗಡೆ ಅವರ ವರದಿಯನ್ನು ತರಾತುರಿಯಲ್ಲಿ ಸ್ವೀಕಾರ ಮಾಡಿದ್ದು ಯೋಗ್ಯವಾದ ನಿರ್ಣಯವಲ್ಲ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.



ಜಾತಿ ಜನಗಣತಿಯನ್ನು ನಾವ್ಯಾರೂ ವಿರೋಧಿಸುವುದಿಲ್ಲ. ಆದರೆ ವೀರಶೈವ ಲಿಂಗಾಯತ ಸಮುದಾಯವಾಗಲಿ, ಒಕ್ಕಲಿಗ ಸಮುದಾಯದಲ್ಲಾಗಲಿ ವೈಜ್ಞಾನಿಕವಾಗಿ ಜನಗಣತಿ ನಡೆದಿರುವದಿಲ್ಲ. ಕೆಲವೇ ಕೆಲವು ಮಾಹಿತಿಗಳನ್ನು ಆಧರಿಸಿ ಕಾಂತರಾಜ ವರದಿ ಸಿದ್ಧವಾಗಿದೆ. ಈಗಾಗಲೇ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯಾಗಲಿ, ಈ ನಾಡಿನ ಪೀಠ ಮಠಗಳಾಗಲಿ ವೈಜ್ಞಾನಿಕವಾಗಿ ಜಾತಿ ಜನಗಣತಿ ನಡೆಯಲಾರದೇ ಇರುವದಕ್ಕೆ ವಿರೋಧ ವ್ಯಕ್ತಪಡಿಸಿದ್ದು ಎಲ್ಲರಿಗೂ ಗೊತ್ತಿದೆ.

ಪ್ರತಿಯೊಂದು ಜಾತಿ ಜನಗಣತಿಯನ್ನು ಪ್ರಾಮಾಣಿಕವಾಗಿ, ಸತ್ಯವಾಗಿ ಗುರುತಿಸಿ, ಸಂಖ್ಯೆಗೆ ಅನುಗುಣವಾಗಿ ಸವಲತ್ತುಗಳನ್ನು ಒದಗಿಸಬೇಕೆಂಬ ಉದ್ದೇಶವೇ ಹೊರತು ಬೇರೇನೂ ಅಲ್ಲ. ಮುಂದಿನ ಚುನಾವಣೆ ದೃಷ್ಟಿಯಿಂದ ಅವಸರದಲ್ಲಿ ಈ ವರದಿಯನ್ನು ಸ್ವೀಕಾರ ಮಾಡಿ ಕಾರ್ಯಗತಗೊಳಿಸಿದರೆ ಇದರ ಪರಿಣಾಮವನ್ನು ಮುಂದಿನ ದಿನಗಳಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಅನುಭವಿಸಲಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಮಾರ್ಚ್ 2ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಡಂಬಳದ 110 ಕೆವ್ಹಿ ಐಪಿಪಿ ಮೆ.ಸುಜಲಾನ್ ಲಿ., ಹಾರೋಗೇರಿ, ಮೆ.ಎನಾರ್ಕಾನ್ ಲಿ., ಮೆ.ಅಕಿಲಾಗ್ಯಾ ಸೋಲಾರ, ಮೆ.ಚುರ್ಚಿಹಾಳ ನೀರಾವರಿ, 110ಕೆ.ವ್ಹಿ. ಡಂಬಳ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11ಕೆ.ವ್ಹಿ. ಮಾರ್ಗಗಳು, 110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಮುಂಡರಗಿಯ 110ಕೆ.ವ್ಹಿ. ಐಪಿಪಿ ಮೆ.ವಿಜಯನಗರ ಶುಗರ್ಸ ಲಿ., ಮೆ.ಬೀಡನಾಳ ನೀರಾವರಿ ಮಾರ್ಗಗಳು.

110ಕೆ.ವ್ಹಿ. ಮುಂಡರಗಿ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 11ಕೆ.ವ್ಹಿ. ಮಾರ್ಗಗಳು, 110ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಶಿಂಗಟಾಲೂರಿನ 110ಕೆ.ವ್ಹಿ. ಶಿಂಗಟಾಲೂರು ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11ಕೆ.ಕೆ.ವ್ಹಿ. ಮಾರ್ಗಗಳು, 110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿತರಣೆಯಾಗುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ಹಾಗೂ ಮೇಲೆ ತಿಳಿಸಿದ ಎಲ್ಲ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

### ■ಅತಿಥಿ ಉಪನ್ಯಾಸಕರ ಹೋರಾಟಕ್ಕೆ ಸಹಕರಿಸಿದ ಮಹನೀಯರಿಗೆ ಸತ್ಕಾರ ■ಸಂಘಟನೆಯ ಗಟ್ಟಿನೆಲೆಗೆ ಸಹಕರಿಸಲು ಕರೆ

# ವರ್ಷಪೂರ್ತಿ ಸೇವೆ ಪರಿಗಣಿಸಲು ಸರಕಾರದೊಂದಿಗೆ ಮಾತುಕತೆ: ಕಲ್ಮನಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ




ಹೋರಾಟವಿಲ್ಲದೆ ಏನನ್ನೂ ಪಡೆಯದ ಕಾಲಘಟ್ಟವಿದು. ಚಳವಳಿ ಇಲ್ಲದಿದ್ದರೆ ಯಾವ ಬೇಡಿಕೆಯೂ ಈಡೇರುವುದಿಲ್ಲ. ಈ ಸಲ ಅತಿಥಿ ಉಪನ್ಯಾಸಕರ ಹೋರಾಟ ಗಟ್ಟಿತನ, ದಿಟ್ಟತನದಿಂದ ಕೂಡಿದ್ದ ಪರಿಣಾಮ, ಸರಕಾರ ಕೆಲ ಬೇಡಿಕೆಗಳನ್ನು ಈಡೇರಿಸಿದೆ. ಇದು ಪ್ರತಿಭಟನೆಯ ಫಲ. ಅತಿಥಿ ಉಪನ್ಯಾಸಕರಿಗೆ ವರ್ಷದ ಹನ್ನೆರಡು ತಿಂಗಳು ಸರಕಾರ ಸೇವೆಗೆ ಅನುವು ಮಾಡಿಕೊಡುವ ಕುರಿತು ಮಾತುಕತೆ ನಡೆದಿದೆ ಎಂದು ಅತಿಥಿ ಉಪನ್ಯಾಸಕರ ಸಂಘಟನೆಯ ರಾಜ್ಯಾಧ್ಯಕ್ಷ ಡಾ.ಹನುಮಂತಗೌಡ ಕಲ್ಮನಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಜಿಲ್ಲಾ ಅತಿಥಿ ಉಪನ್ಯಾಸಕರ ಸಂಘಟನೆಯ ಆಶ್ರಯದಲ್ಲಿ ನಡೆದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಿವೃತ್ತಿ ವಯಸ್ಸನ್ನು 60 ರಿಂದ 65 ವರ್ಷಗಳಿಗೆ ಹೆಚ್ಚಿಸಲು ಇಡುಗಂಟನ್ನು 5 ಲಕ್ಷದಿಂದ 60 ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲು ಸರಕಾರಕ್ಕೆ ಮನವಿ ಸಲ್ಲಿಸಿದ್ದು ಬರುವ ದಿನಗಳಲ್ಲಿ ನಮ್ಮ ಬೇಡಿಕೆಗಳು ಹಂತ ಹಂತವಾಗಿ ಈಡೇರುವ ನಿಟ್ಟಿನಲ್ಲಿ ರಾಜ್ಯ ಸಂಘಟನೆ ಪ್ರಯತ್ನ ನಡೆಸಿದೆ. ಬರುವ ದಿನಗಳಲ್ಲಿ ಅತಿಥಿ ಉಪನ್ಯಾಸಕರು ಸಹ ಶೈಕ್ಷಣಿಕ ಅರ್ಹತೆಗಳಿಸುವ ನಿಟ್ಟಿನಲ್ಲಿ ಪ್ರಯತ್ನಿಸಬೇಕು ಎಂದು ಕಲ್ಮನಿ ಕರೆ ನೀಡಿದರು.

ಕೊಪ್ಪಳ ಹೋರಾಟದ ಕಿಚ್ಚಿರುವ ನೆಲ. ಅತಿಥಿ ಉಪನ್ಯಾಸಕರ ಹೋರಾಟದಲ್ಲಿ ಇಡೀ ರಾಜ್ಯದಲ್ಲೇ ಕೊಪ್ಪಳ ಜಿಲ್ಲೆ ಮುಂಚೂಣಿಯಲ್ಲಿತ್ತು. ಹೀಗೇ ಎಲ್ಲ ಜಿಲ್ಲೆಗಳಲ್ಲೂ ಸಂಘಟನೆ ಮತ್ತಷ್ಟೂ ಸದೃಢವಾಗಲು ಎಲ್ಲರ ಸಹಕಾರ ಅತ್ಯಗತ್ಯ. ಹೋರಾಟಕ್ಕೆ ಸಹಕಾರ ನೀಡಿದ ಎಲ್ಲ ಮಹನೀಯರನ್ನು ಸ್ಮರಿಸಬೇಕಾದದ್ದು ನಮ್ಮ ಕರ್ತವ್ಯ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಮಂಜುನಾಥ ಗೊಂಡಬಾಳ ಮಾತನಾಡಿ, ಅತಿಥಿ ಉಪನ್ಯಾಸಕರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಸರಕಾರ ಬದ್ಧವಾಗಿದೆ. ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಕೆಲಸ ಮಾಡುವ ಬೋಧಕ ಸಿಬ್ಬಂದಿ ರಕ್ಷಣೆಗೆ ಸದಾ ಸಿದ್ಧ ಎಂದು ಭರವಸೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪ್ರೊ.ತಿಮ್ಮಾರಡ್ಡಿ ಮೇಟಿ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕ, ಕಾಯಂ ಉಪನ್ಯಾಸಕ ಎಂಬ ಭೇದವಿಲ್ಲ. ಕಾಲೇಜಿನ ಏಳಿಗೆ ಹಿನ್ನೆಲೆಯಲ್ಲಿ ನಾವೆಲ್ಲ ಒಟ್ಟಾಗಿ ಕಾರ್ಯ ನಿರ್ವಹಿಸುತ್ತೇವೆ. ಸರಕಾರದ ಆದೇಶ ಪಾಲನೆಯ ಜೊತೆಗೆ ಮಾನವೀಯ ಕಾಳಜಿ ನಮ್ಮ ಕಾಲೇಜಿನ ಸಿಬ್ಬಂದಿಗಿದೆ. ಆದಷ್ಟೂ ಬೇಗನೇ ಅತಿಥಿ ಉಪನ್ಯಾಸಕರ ಇತರೆ ಬೇಡಿಕೆಗಳು ಈಡೇರುವಂತಾಗಲಿ ಎಂದು ಶುಭ ಹಾರೈಸಿದರು.

ಅತಿಥಿ ಉಪನ್ಯಾಸಕರ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಡಾ.ವಿನೋದ ಚಂದ ಪೀಟರ್, ಜಿಲ್ಲಾಧ್ಯಕ್ಷ ಡಾ.ವೀರಣ್ಣ ಸಜ್ಜನರ್, ಪ್ರಧಾನ ಕಾರ್ಯದರ್ಶಿ ಡಾ.ಸಣ್ಣದೇವೇಂದ್ರಸ್ವಾಮಿ, ಮಹಿಳಾ ಮುಖಂಡರಾದ ಗಿರಿಜಾ ತುರಮುರಿ ಮಾತನಾಡಿದರು.

ವೀಣಾ ಪೂಜಾರ್ತಿ ಪ್ರಾರ್ಥಿಸಿದರು. ಬಸವರಾಜ ಕರುಗಲ್ ಪ್ರಾಸ್ತಾವಿಕ ಮಾತನಾಡಿದರು. ಗೀತಾ ಬನ್ನಿಕೊಪ್ಪ ಸ್ವಾಗತಿಸಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಶಿವಬಸಪ್ಪ ಮಸ್ಕಿ ವಂದಿಸಿದರು.

ಈ ವೇಳೆ ಡಾ.ತುಕಾರಾಂ ನಾಯಕ, ವಿಜಯಕುಮಾರ್.ಕೆ., ಅಶೋಕ ಯಕ್ಲಾಸಪುರ, ಪ್ರಕಾಶ್ ಜಡಿಯವರ್, ಜ್ಞಾನೇಶ್ವರ ಪತ್ತಾರ, ಗೋಣಿಬಸಪ್ಪ, ಸೋಮೇಶ್ ಉಪ್ಪಾರ, ಶಂಕರಾನಂದ, ವಿಜಯ ಕುಲಕರ್ಣಿ, ಡಾ.ಪ್ರಕಾಶ್ ಬಳ್ಳಾರಿ, ಸಿ.ಬಸವರಾಜ, ವಸಂತಕುಮಾರ, ಗುರುಬಸವ ರಾಘವೇಂದ್ರ, ಲತಾ, ಉಷಾ, ಅಕ್ಕಮಹಾದೇವಿ, ವಿದ್ಯಾ, ನವೀನ್, ಮಾರುತಿ, ಶಿವಮೂರ್ತಿಸ್ವಾಮಿ ಗುತ್ತೂರು, ಬಿಷ್ಟಪ್ಪ, ನಜ್ಮಾ, ಸುಷ್ಮಾ, ಅನುರಾಧಾ, ಡಾ.ವಿಪ್ಲವಿ, ಡಾ.ಸಾವಿತ್ರಿ ಕಣವಿ ಮತ್ತಿತರರು ಇದ್ದರು.

#### ಗಣ್ಯರಿಗೆ ಸನ್ಮಾನ

ಅತಿಥಿ ಉಪನ್ಯಾಸಕರ ಹೋರಾಟದ ವೇಳೆ ನಾನಾ ರೀತಿಯಲ್ಲಿ ಸಹಾಯ ಸಹಕಾರ ನೀಡಿದ ಡಾ.ಡಿ.ಎಚ್.ನಾಯಕ್, ಡಾ.ಭಾಗ್ಯಜ್ಯೋತಿ, ಗಾಯತ್ರಿ ಭಾವಿಕಟ್ಟಿ, ಡಾ.ಹನುಮಂತಗೌಡ ಕಲ್ಮನಿ, ಡಾ.ವಿನೋದ ಚಂದ ಪೀಟರ್, ಪ್ರೊ.ತಿಮ್ಮಾರಡ್ಡಿ ಮೇಟಿ, ಮಂಜುನಾಥ ಗೊಂಡಬಾಳ, ಸಂತೋಷಕುಮಾರಿ.ಎನ್, ರವಿಕಿರಣ್ ರಾಠೋಡ್, ಜಯಪ್ರಕಾಶ್ ಬಿರಾದಾರ್ ಮತ್ತಿತರರನ್ನು ಸತ್ಕರಿಸಿದರು.

# ಹುತಾತ್ಮ ವೀರಯೋಧನ ಸ್ಮಾರಕ ನಿರ್ಮಾಣಕ್ಕೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ



ಹತ್ತು ವರ್ಷಗಳು ಗತಿಸಿದರೂ ಹುತಾತ್ಮ ಯೋಧನ ಸ್ಮಾರಕ ನಿರ್ಮಾಣಕ್ಕಾಗಿ ಜಾಗದ ಗಣಕೀಕೃತ ಪಹಣಿಯನ್ನು ಮಾಡಿಕೊಡದೆ ವೀರಯೋಧನಿಗೆ ಅವಮಾನಗೊಳಿಸುತ್ತಿರುವುದನ್ನು ಖಂಡಿಸಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಬಸವಲಿಂಗಪ್ಪ ಮುಂಡರಗಿ ಅವರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿದರು.

ಗದಗ ತಾಲೂಕ ಕೋಟುಮಚಗಿ ಗ್ರಾಮದ ಹುತಾತ್ಮ ವೀರಯೋಧ ಬಸವರಾಜ ಅಂದಪ್ಪ ರಮಾಣಿರವರು 2014ರಲ್ಲಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸಂದರ್ಭದಲ್ಲಿ ಉಗ್ರರ ಗುಂಡಿನ ದಾಳಿಗೆ ಬಲಿಯಾಗಿ ಹುತಾತ್ಮರಾಗಿದ್ದರು. ಹುತಾತ್ಮ ವೀರಯೋಧನ ಅಂತಿಮ ಸಂಸ್ಕಾರವನ್ನು ಗ್ರಾಮದ ಮುಖ್ಯ ಹೆದ್ದಾರಿ ರಸ್ತೆಗೆ ಹೊಂದಿಕೊಂಡಿರುವ ಸರ್ಕಾರಿ ಜಾಗದಲ್ಲಿ ನೆರವೇರಿಸಿ, ಅವತ್ತಿನ ಸಮಯದಲ್ಲಿ ಹುತಾತ್ಮ ವೀರಯೋಧನ ಸ್ಮಾರಕ ಮತ್ತು ಉದ್ಯಾನವನಕ್ಕಾಗಿ ಅದೇ ಜಾಗದಲ್ಲಿ 130*130 ಅಡಿ ಜಾಗೆಯನ್ನು ಮಂಜೂರು ಮಾಡಿ ಠರಾವುಗೊಳಿಸಿ, ಕೈಬರಹ ಉತಾರವನ್ನು ಪೂರೈಸಿ ಕೊಟ್ಟಿದ್ದರಾದರೂ ಮುಂದುವರೆದು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮನವಿಯನ್ನು ಸ್ವೀಕರಿಸಿ, ಶೀಘ್ರವೇ ಈ ಜಾಗದ ಗಣಕೀಕೃತ ಪಹಣಿಯನ್ನು ತಯಾರಿಸಿ ಉದ್ಯಾನವನವನ್ನು ಅಭಿವೃದ್ಧಿಗೊಳಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ಎಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕ್ರೀಡಾಕೂಟದಲ್ಲಿ ಹೆಚ್.ಎನ್ ಗೌಡರ ತೃತೀಯ

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ 2023–24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕ್ರೀಡಾಕೂಟದಲ್ಲಿ ಮುಂಡರಗಿ ತಾಲೂಕ ಶಿಕ್ಷಣ ಇಲಾಖೆಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಹೆಚ್.ಎನ್. ಗೌಡರವರು 50–60 ವಯೋಮಾನದ ವಿಭಾಗದಲ್ಲಿ 100 ಮೀ ಮತ್ತು 400 ಮೀ ಓಟದಲ್ಲಿ ತೃತೀಯ ಸ್ಥಾನ ಗಳಿಸಿದ್ದಾರೆ.

ಇವರಿಗೆ ಗದಗ ಜಿಲ್ಲಾ ನೌಕರರ ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

## ಒಮ್ಮತವಿಲ್ಲದೇ ವಿಶೇಷ ಸಭೆ ಮುಕ್ತಾಯ

▶▶ಮೊದಲನೇ ಪುಟದಿಂದ

ಅಧ್ಯಕ್ಷೆ ಉಷಾ ದಾಸರ ನಿರ್ಣಯ ಮಂಡಿಸಿ ಸಭೆಯಿಂದ ಹೊರ ನಡೆಯುತ್ತಿದ್ದಂತೆ ಪ್ರತಿಪಕ್ಷದ ಸದಸ್ಯರು ಪೌರಾಯುಕ್ತರಿಗೆ ದಿಗ್ಬಂಧನ ವಿಧಿಸಿದರು. ನಿಯಮ 48ರ ಅಡಿ ಸಭೆ ಕರೆದಿದ್ದು ಸರಿಯಿದೆಯೇ ಎನ್ನುವುದನ್ನು ಸ್ಪಷ್ಟಪಡಿಸಿ ಎಂದು ಪಟ್ಟುಹಿಡಿದರು. ಅಂತಿಮವಾಗಿ ಪ್ರತಿಕ್ರಿಯೆ ನೀಡಿದ ಪೌರಾಯುಕ್ತ ಮಾರುತಿ ಬ್ಯಾಕೋಡ್, ಅಧ್ಯಕ್ಷರ ಸೂಚನೆ ಮೇರೆಗೆ ಸಾಮಾನ್ಯ ಸಭೆ ಕರೆಯಲಾಗಿದೆ. ಚರ್ಚೆಯ ವಿಷಯವನ್ನೂ ತಿಳಿಸಲಾಗಿದೆ. ಆದರೂ ನಿಯಮ ಮೀರಿ ಸಭೆ ನಡೆಸಲಾಗಿದೆ ಎಂದರೆ ಹಿರಿಯ ಅಧಿಕಾರಿಗಳಿಗೆ ದೂರು ನೀಡಬಹುದು ಎಂದು ಸ್ಪಷ್ಟಪಡಿಸಿದರು.

## ಆರೋಗ್ಯ ಸಂಪತ್ತು ಅಮೂಲ್ಯವಾಗಿದೆ

▶▶ಮೊದಲನೇ ಪುಟದಿಂದ

ಇದೇ ಸಂದರ್ಭದಲ್ಲಿ ರಾಷ್ಟ್ರಮಟ್ಟದ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಅಧ್ಯಕ್ಷ ರವಿ ಗುಂಜೀಕರ್, ಪಿ.ಎಚ್.ಕಡಿವಾಳ, ಸತೀಶ ಕಟ್ಟಿಮನಿ, ಅಶೋಕ ಹಾದಿ ಸೇರಿದಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕಾ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು, ವಿವಿಧ ಇಲಾಖೆಯ ಕ್ರೀಡಾಪಟುಗಳು ಹಾಜರಿದ್ದರು.

ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು. ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಕೆ.ಬಿ. ಕೊಣ್ಣೂರ ವಂದಿಸಿದರು.

### ನಿಡಗುಂದಿಕೊಪ್ಪ ಶಾಖಾ ಮಠದಲ್ಲಿ ಲಿಂ.ಹಾನಗಲ್ಲ ಕುಮಾರ ಮಹಾಶಿವಯೋಗಿಗಳ 94ನೇ ಪುಣ್ಯ ಸ್ಮರಣೋತ್ಸವ


# ಇಂದಿನಿಂದ ಶಿವಯೋಗಮಂದಿರದ ಜಾತ್ರಾಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಕೊಪ್ಪ ಶಾಖಾ ಶಿವಯೋಗಮಂದಿರದಲ್ಲಿ ಲಿಂ.ಹಾನಗಲ್ಲ ಕುಮಾರ ಮಹಾಶಿವಯೋಗಿಗಳವರ 94ನೇ ಪುಣ್ಯ ಸ್ಮರಣೋತ್ಸವ, ಜಾತ್ರಾಮಹೋತ್ಸ, ಅಡ್ಡಪಲ್ಲಕ್ಕಿ ಮಹೋತ್ಸವವು ಮಾ.3 ಮತ್ತು 4ರಂದು ಜರುಗಲಿದೆ.

ಮಾ. 3ರಂದು ಬೆಳಿಗ್ಗೆ 6 ಗಂಟೆಗೆ ಲಿಂ. ಚನ್ನಬಸವ ಶಿವಯೋಗಿ ಹಾಗೂ ಲಿಂ. ಶಿವಬಸವ ಸ್ವಾಮೀಜಿಗಳ ಗದ್ದುಗೆಗೆ ಮಹಾರುದ್ರಾಭೀಷೇಕ, ಸಹಸ್ರ ಬಿಲ್ವಾರ್ಚನೆ ಜರುಗಲಿದೆ. ಬೆಳಗ್ಗೆ 11 ಗಂಟೆಗೆ ಶ್ರೀ ಕುಮಾರೇಶ್ವರರ ಭಾವಚಿತ್ರದ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀಮಠ ತಲುಪಲಿದೆ.

ಮದ್ಯಾಹ್ನ ಉಚಿತ ಆರೋಗ್ಯ ತಪಾಸಣಾ ಶಿಬಿರ ಜರುಗಲಿದ್ದು, ಡಾ. ಪ್ರಶಾಂತ ಧನ್ನೂರ, ಡಾ. ಅನ್ನಪೂರ್ಣ ಧನ್ನೂರ, ಡಾ. ಅರುಣ ಇಂಗಳೆ ಭಾಗಹಿಸಲಿದ್ದಾರೆ. ಮದ್ಯಾಹ್ನ 2 ಗಂಟೆಗೆ ಮಹಾಗಣಾರಾಧನೆ ಜರುಗಲಿದೆ. ಸಂಜೆ 7 ಗಂಟೆಗೆ ಶ್ರೀ ಕುಮಾರೇಶ್ವರ ಸಂಸ್ಮರಣಾ ಸಭೆ ಜರುಗಲಿದೆ.



ರೋಣ ಗುಲಗಂಜಿಮಠದ ಗುರುಪಾದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಯಲಬುರ್ಗಾ ಶ್ರೀಧರ ಮುರಡಿ ಹಿರೇಮಠದ ಬಸವಲಿಂಗ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಜೀಗೇರಿ ಹಿರೇಮಠದ ಸಿದ್ಧೇಶ್ವರ ಶಿವಾಚಾರ್ಯರು ಸಮ್ಮುಖ ವಹಿಸುವರು. ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಿವಾನಂದ ಮಠದ, ಮುತ್ತಣ್ಣ ಕಡಗದ ಆಗಮಿಸಲಿದ್ದಾರೆ. ಶಿಕ್ಷಕ ಎಸ್.ಎಸ್. ನರೇಗಲ್ಲ ಉಪನ್ಯಾಸ ನೀಡಲಿದ್ದಾರೆ. ಕೊತಬಾಳದ ಅರುಣೋದಯ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಮಾ. 4ರಂದು ಸಂಜೆ 5.30ಕ್ಕೆ ಶ್ರೀ ಕುಮಾರೇಶ್ವರ ಮಹಾರಥೋತ್ಸವ ಜರುಗಲಿದೆ. ಸಂಜೆ 6 ಗಂಟೆಗೆ ಧಾರ್ಮಿಕ ಹಾಗೂ ಸನ್ಮಾನ ಸಮಾರಂಭ ಜರುಗಲಿದ್ದು, ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಹರ್ಲಾಪೂರ ಶ್ರೀ ಕೊಟ್ಟೂರೇಶ್ವರ ಮಠದ ಡಾ. ಅಭಿನವ ಕೊಟ್ಟೂರೇಶ್ವರ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ಚಂದ್ರಶೇಖರ ದೇವರು ಸಮ್ಮುಖ ವಹಿಸುವರು. ಶಾಸಕ ಜಿ.ಎಸ್. ಪಾಟೀಲ, ಸಿದ್ದಣ್ಣ ಬಂಡಿ, ಶರಣಪ್ಪ ಬೆಟಗೇರಿ, ಮಂಜುಳಾ ರೇವಡಿ, ಗೀತಾ ಕುಕನೂರ ಸೇರಿದಂತೆ ಇತರರು ಪಾಲ್ಗೊಳ್ಳಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಮಾ. 4ರಂದು ಬೆಳಿಗ್ಗೆ 9 ಗಂಟೆಗೆ ಶಿವಾಪೂರ ಅಂಕಲಗಿ ಅಡವಿಸಿದ್ಧೇಶ್ವರ ಮಠದ ಅಡವಿ ಸಿದ್ದರಾಮ ಸ್ವಾಮೀಜಿಗಳ ಅಡ್ಡ ಪಲ್ಲಕ್ಕಿ ಉತ್ಸವವು ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಲಿದೆ. ರೋಣ ರಾಜೀವಗಾಂಧಿ ಆಯುರ್ವೇದ ಕಾಲೇಜಿನ ಸಹಯೋಗದಲ್ಲಿ ಬೆಳಿಗ್ಗೆ 11 ಗಂಟೆಗೆ 'ನಮ್ಮ ಆರೋಗ್ಯ ನಮ್ಮ ಕಾಳಜಿ' ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರ ಜರುಗಲಿದೆ. ರೋಣ ಪುರಸಭೆ ಉಪಾಧ್ಯಕ್ಷ ಮಿಥುನ ಪಾಟೀಲ ಉದ್ಘಾಟಿಸುವರು. ಪ್ರಾಚಾರ್ಯ ಡಾ. ಐ.ಬಿ. ಕೊಟ್ಟೂರಶೆಟ್ಟರ, ಡಾ. ಎಸ್.ಸಿ. ಸರ್ವಿ, ಡಾ. ಬಿ.ಎಸ್. ಗೌಡಪ್ಪಗೌಡ್ರ, ಬಸವರಾಜ ಹಿರೇಮಠ, ಮಹಾಂತೇಶ ಹಿರೇಮಠ ಆಗಮಿಸಲಿದ್ದಾರೆ.

### ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನ ವಸ್ತು ಪ್ರದರ್ಶನ

# ವೈಜ್ಞಾನಿಕ ಮನೋಭಾವನೆ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ನಿತ್ಯ ಜೀವನದಲ್ಲಿ ಜರುಗುವ ಚಿಕ್ಕ ಚಿಕ್ಕ ಸಂಗತಿಗಳಲ್ಲಿ ವಿಜ್ಞಾನವಿರುತ್ತದೆ. ಅದನ್ನು ಆಳವಾಗಿ ಅಧ್ಯಯನ ಮಾಡಿ ಅದರಲ್ಲಿರುವ ವೈಜ್ಞಾನಿಕ ಮನೋಭಾವನೆಯನ್ನು ಬಾಲ್ಯದಲ್ಲೇ ಅರ್ಥಮಾಡಿಕೊಂಡಾಗ ವಿಜ್ಞಾನ ಅರ್ಥವಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಬಾಲ್ಯದಿಂದಲೇ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಉಪಸಮನ್ವಯ ಯೋಜನಾಧಿಕಾರಿ ಎಂ.ಎಚ್. ಕಂಬಳಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆ ನಂ.2ರಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯಂಗವಾಗಿ ಏರ್ಪಡಿಸಿದ್ದ ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ವಿಜ್ಞಾನ ವಿಸ್ಮಯ ಹಾಗೂ ಕುತೂಹಲಕಾರಿಯಾದ ವಿಷಯ ವಾಗಿದೆ. ಈ ಕುತೂಹಲವನ್ನು ಅರಿಯಬೇಕಾದರೆ ವಿದ್ಯಾರ್ಥಿಗಳು ವೈಜ್ಞಾನಿಕ ದೃಷ್ಟಿಕೋನದಿಂದ ಪ್ರತಿಯೊಂದು ಸಂಗತಿಯನ್ನು ಅಧ್ಯಯನ ಮಾಡಿದಾಗ ವಿಷಯ ಮನದಟ್ಟಾಗುತ್ತದೆ. ಎಲ್ಲ ವಿಚಾರದಲ್ಲೂ ವಿಜ್ಞಾನದ ಅಂಶಗಳನ್ನು ಹುಡುಕುವ ಪ್ರಯತ್ನವನ್ನು ಮಾಡಬೇಕು ಹಾಗೂ ಪ್ರತಿಯೊಂದನ್ನೂ ಏಕೆ, ಹೇಗೆ, ಯಾವಾಗ, ಎಲ್ಲಿ ಎಂಬ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಅಂದಾಗ ಮಾತ್ರ ನಿಮ್ಮ ಮುಂದಿನ ಜೀವನವು ಉಜ್ವಲವಾಗುವುದರೊಂದಿಗೆ ಜ್ಞಾನವಂತರಾಗಿ ಜೀವನ ನಡೆಸಲು ಸಹಾಯಕಾರಿಯಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಮುಖ್ಯ ಅತಿಥಿಗಳಾಗಿ ಎ.ಪಿ.ಸಿ.ಓ ಎಂ.ವ್ಹಿ. ಹವಾಲ್ದಾರ್, ಬಿ.ಆರ್.ಪಿ ಪ್ರಕಾಶ ಮಂಗಳೂರ, ಶಾಲೆಯ ಮುಖ್ಯೋಪಾಧ್ಯಾಯೆ ಎಫ್.ಜೆ. ದಲಬಂಜನ ಉಪಸ್ಥಿತರಿದ್ದರು. ವ್ಹಿ.ಎಸ್. ಕಬ್ಬರಗಿ ಸ್ವಾಗತಿಸಿದರು. ಶ್ರೀಮತಿ ನಾಗನೂರ ನಿರೂಪಿಸಿದರು. ವೀಣಾ ಪಾಟೀಲ ವಂದಿಸಿದರು. ಇಂದಿರಾಬಾಯಿ, ಬಂಡಿವಡ್ಡರ, ಎಸ್.ಡಿ.ಎಂ.ಸಿ ಪದಾಧಿಕಾರಿಗಳು ಹಾಗೂ ಅಡುಗೆ ಸಿಬ್ಬಂದಿಯವರು ಉಪಸ್ಥಿತರಿದ್ದರು.

ವಸ್ತು ಪ್ರದರ್ಶನದಲ್ಲಿ ವಿದ್ಯಾರ್ಥಿಗಳು ಸೌರವ್ಯೂಹ, ಆಮ್ಲಜನಕದ ಪ್ರಯೋಜನ, ಮಾದರಿ ಗಣಕಯಂತ್ರ, ಮಾಯಾಮಳೆ, ವಸ್ತುವಿನ ಮೇಲ್ಮುಖ ಒತ್ತಡ, ಮಾಯಾ ಬಲೂನ್, ಶಾಖದ ವರ್ಗಾವಣೆ ಮುಂತಾದ ವಿಷಯಗಳ ಕುರಿತು ಮಾದರಿಗಳನ್ನು ಪ್ರದರ್ಶಿಸಿ ಪ್ರಾತ್ಯಕ್ಷಿಕೆಯನ್ನು ನೀಡಿದರು.

## ದ್ವಿತೀಯ ಪಿಯುಸಿ ಪರೀಕ್ಷಾರ್ಥಿಗಳಿಗೆ ಶುಭ ಹಾರೈಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಸ್ಟುಡೆಂಟ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ದ್ವಿತೀಯ ಪಿ.ಯು.ಸಿ 2023-24ನೇ ಸಾಲಿನ ವಾರ್ಷಿಕ ಪರೀಕ್ಷೆಗಳು ಮಾ.1ರಿಂದ ಮಾ.22ರವರೆಗೆ ಜರುಗಲಿದ್ದು, ಮೊದಲನೇ ದಿನದ ಕನ್ನಡ ಪರೀಕ್ಷೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಸಿಹಿ ವಿತರಿಸಿ, ವಿದ್ಯಾರ್ಥಿಗಳಿಗೆ ಧೈರ್ಯದಿಂದ ಮತ್ತು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಲು ಉತ್ಸಾಹ ತುಂಬಿದರು.

ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ಪ್ರಾಚಾರ್ಯರು, ಯಾವುದೇ ಗೊಂದಲಗಳಿಗೆ ಅವಕಾಶ ಕೊಡದೆ ಏಕಚಿತ್ತದಿಂದ, ಶಾಂತ ಮನಸ್ಸಿನಿಂದ ಉತ್ತರಗಳನ್ನು ಸೂಚನೆಗನುಸಾರವಾಗಿ ಬರೆಯುವಂತೆ ತಿಳಿಸಿದರು.

ಸಂಸ್ಥೆಯ ನಿರ್ದೇಶಕ ಪ್ರೊ. ಸೈಯದ್ ಮತೀನ್ ಮುಲ್ಲಾ, ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಸಲಹೆ-ಸೂಚನೆಗಳನ್ನು ನೀಡಿ, ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಪ್ರೊ. ಮುರಲೀಧರ ಸಂಕನೂರ, ಪ್ರೊ. ಎಚ್.ಎಸ್. ದಳವಾಯಿ, ಪ್ರೊ. ಪರಶುರಾಮ ಕೊಟ್ನಿಕಲ್, ಪ್ರೊ. ಆಯ್.ಆರ್. ಅಳವಂಡಿ, ಪ್ರೊ. ವಿಜಯಕುಮಾರ ಹೆಬಸೂರ, ಪ್ರೊ. ಸಂತೋಷ ನಾಗರಾಳ, ಪ್ರೊ. ಎಸ್.ಎಸ್. ವಜ್ರಬಂಡಿ, ಪ್ರೊ. ಡಿ.ಬಿ. ಕುಲಕರ್ಣಿ ಮತ್ತು ಸರ್ವ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು ಪರೀಕ್ಷಾರ್ಥಿಗಳಿಗೆ ಶುಭ ಹಾರೈಸಿದರು.

## ಇಂದು ಮಕ್ಕಳ ಹಬ್ಬ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ , ಕರ್ನಾಟಕ ಬಾಲ ವಿಕಾಸ ಅಕಾಡಮಿ ಧಾರವಾಡ, ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಾರ್ಚ್ 2 ರಂದು ಬೆಳಿಗ್ಗೆ 9.30 ಗಂಟೆಗೆ ನಗರದ ಮುಳಗುಂದ ರಸ್ತೆಯಲ್ಲಿನ ಕನಕ ಭವನದಲ್ಲಿ ಮಕ್ಕಳ ಹಬ್ಬ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ , ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ ಆಗಮಿಸುವರು.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ. ಎಸ್. ನೇಮಗೌಡ, ಧಾರವಾಡದ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಯೋಜನಾಧಿಕಾರಿಗಳಾದ ಶ್ರೀಮತಿ ಭಾರತಿ ಶೆಟ್ಟರ್ ಅವರು ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ, ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿಗಳಾದ ಶ್ರೀಮತಿ ರಾಧಾ ಜಿ ಮಣ್ಣೂರ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಾದ ಡಾ. ಕಮಲವ್ವ ಬೈಲೂರ , ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಸ್ವಾಗತ ಕೋರಿದ್ದಾರೆ.

## ಹಿರಿಯ ಪತ್ರಕರ್ತ ರಾಮ ಮನಗೂಳಿ ನಿಧನಕ್ಕೆ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಹಿರಿಯ ಪತ್ರಕರ್ತರಾದ ಬಾಗಲಕೋಟೆಯ ರಾಮ ಮನಗೂಳಿ ಅವರು ಶುಕ್ರವಾರ ಅನಾರೋಗ್ಯದಿಂದ ಕೆರೂಡಿ ಆಸ್ಪತ್ರೆಯಲ್ಲಿ ನಿಧನರಾದರು. ಇವರು ಸಂಯುಕ್ತ ಕರ್ನಾಟಕ ಪತ್ರಿಕೆಯ ಸ್ಥಾನಿಕ ಸಂಪಾದಕರು, ನಾಡನುಡಿ ದಿನ ಪತ್ರಿಕೆಯ ಸಂಪಾದಕರಾಗಿದ್ದರು. ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ, ಮಾಧ್ಯಮ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗೆ ಭಾಜನರಾಗಿದ್ದರು.



2002ರಲ್ಲಿ ಬಾಗಲಕೋಟೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವ ಸಂದರ್ಭದಲ್ಲಿ ಬಾಗಲಕೋಟೆಯಲ್ಲಿ ಅವರ ನೇತೃತ್ವದಲ್ಲಿ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ, ಬಾಗಲಕೋಟೆ ಜಿಲ್ಲೆಯಲ್ಲಿ ಪ್ರೆಸ್‌ಕ್ಲಬ್ ವತಿಯಿಂದ ಬೆಳಗಾವಿ ವಿಭಾಗ ಮಟ್ಟದ ಪತ್ರಕರ್ತರ ಕಾರ್ಯಾಗಾರವನ್ನು ಯಶಸ್ವಿಯಾಗಿ ನಡೆಸಿದ್ದರು.

ರಾಮ ಮನಗೂಳಿ ಅವರ ನಿಧನಕ್ಕೆ ರಾಜ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಹಾಗೂ ಲೋಕ ಶಿಕ್ಷಣ ಧರ್ಮದರ್ಶಿ ಮಂಡಳಿಯ ಟ್ರಸ್ಟಿಗಳು, ಮಾಜಿ ಶಾಸಕರಾದ ಡಿ.ಆರ್. ಪಾಟೀಲ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಪಿಯುಸಿ ಪರೀಕ್ಷಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಿ ಆಶೀರ್ವದಿಸಿದ ಮುಪ್ಪಿನ ಬಸವಲಿಂಗ ಶ್ರೀಗಳು

# ಸಮಾಧಾನ ಚಿತ್ತದಿಂದ ಪರೀಕ್ಷೆ ಬರೆಯಿರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿಜಯಸಾಕ್ಷಿ ಸುದ್ದಿ, ಪರೀಕ್ಷೆಯನ್ನು ಹಬ್ಬದಂತೆ ಆಚರಿಸಿ. ನಿಮ್ಮಲ್ಲಿನ ದುಗುಡವನ್ನು ದೂರೀಕರಿಸಿ ಸಮಾಧಾನದಿಂದ ಉತ್ತರ ಬರೆದರೆ ಯಶಸ್ಸು ಖಂಡಿತವಾಗಿಯೂ ನಿಮ್ಮ ವಶವಾಗುತ್ತದೆ ಎಂದು ಹಾಲಕೆರೆ ಸಂಸ್ಥಾನದ ಪೀಠಾಧಿಪತಿ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಶುಕ್ರವಾರ ಪ್ರಾರಂಭಗೊಂಡ ಪಿಯುಸಿ ಪರೀಕ್ಷೆಯ ಪರೀಕ್ಷಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ತುಂಬಿ ಶ್ರೀಗಳು ಆಶೀರ್ವಚನ ನೀಡಿದರು.

ಗದಗ ಜಿಲ್ಲೆಯಲ್ಲಿ ನಮ್ಮ ಸಂಸ್ಥೆಯ ಹೆಸರು ಮುಂಚೂಣಿಯಲ್ಲಿದೆ. ನಮ್ಮ ಗುರುಗಳಾಗಿದ್ದ ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಎಂದಿಗೂ ನಕಲಿಗೆ ಪ್ರೋತ್ಸಾಹ ನೀಡಿದವರಲ್ಲ. ಈಗ್ಗೆ 34 ವರ್ಷಗಳ ಹಿಂದೆಯೇ ಅವರು ನಕಲನ್ನು ಈ ಸಂಸ್ಥೆಯಿಂದ ಹೊಡೆದೋಡಿಸಿ ಪ್ರತಿಭೆಗೆ ಗೌರವ ಸಿಗಬೇಕೆಂದು ಶ್ರಮಿಸಿ ಯಶಸ್ವಿಯಾದರು. ಅವರ ಆಶೀರ್ವಾದದಿಂದ ಅವರ ಹೆಸರಿನಲ್ಲಿ ನೂತನವಾಗಿ ಪ್ರಾರಂಭವಾಗಿರುವ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆಯುತ್ತಿರುವ ನೀವು ನಕಲಿಗೆ ಮನಸ್ಸು ಮಾಡದೆ ಪ್ರಾಮಾಣಿಕತೆಯಿಂದ ಪರೀಕ್ಷೆ ಬರೆಯಿರಿ. ಇದು ಭವಿಷ್ಯದಲ್ಲಿ ನಿಮ್ಮ ಜೀವನದಲ್ಲಿ ಒಂದು ಉತ್ತಮ ಮೌಲ್ಯವಾಗಲಿದೆ ಎಂದು ಹೇಳಿ ವಿದ್ಯಾರ್ಥಿಗಳಿಗೆ ಸಿಹಿ ಹಂಚುವ ಮೂಲಕ ಎಲ್ಲ ವಿದ್ಯಾರ್ಥಿಗಳನ್ನು ಆಶೀರ್ವದಿಸಿದರು.



ನಂತರ ಶ್ರೀಗಳು ನೂತನ ಶ್ರೀ ಅಭಿನವ ಅನ್ನದಾನೇಶ್ವರ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದರು. ಅಲ್ಲಿ ಪ.ಪೂ. ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಶುಭ ಕೋರಿದರು. ಸಂಸ್ಥೆಗೆ ಎರಡು ಪರೀಕ್ಷಾ ಕೇಂದ್ರಗಳು ಮಂಜೂರಾದದ್ದಕ್ಕೆ ಶ್ರೀಗಳು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಸದಸ್ಯರಾದ ಡಾ. ಜಿ.ಕೆ ಕಾಳೆ, ವೀರಣ್ಣ ಶೆಟ್ಟರ, ನಿಂಗನಗೌಡ ಲಕ್ಕನಗೌಡ್ರ, ನಿವೃತ್ತ ಉಪನ್ಯಾಸಕ ತಳಬಾಳ, ಡಾ. ಶಿವಯ್ಯ ರೋಣದ, ಪ್ರಾಚಾರ್ಯೆ ಅನಸೂಯಾ ಪಾಟೀಲ, ಪರೀಕ್ಷಾ ಅಧಿಕಾರಿಗಳು, ಸಿಬ್ಬಂದಿಯವರು ಉಪಸ್ಥಿತರಿದ್ದರು. ಎಸ್.ಎ. ಪಿಯು ಕಾಲೇಜ್ ಪ್ರಾಚಾರ್ಯ ವೈ.ಸಿ. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕ ಎಫ್.ಎನ್. ಹುಡೇದ, ನಂದೀಶ ಅಚ್ಚಿ ನಿರ್ವಹಿಸಿದರು.

ಪರೀಕ್ಷೆಯೆಂದು ಯಾರೂ ಹೆದರಬೇಕಾಗಿಲ್ಲ. ಒಂದಿಡೀ ವರ್ಷ ನೀವು ಓದಿದ ವಿಷಯಗಳ ಬಗ್ಗೆ ಪ್ರಶ್ನೆಗಳಿರುತ್ತವೆ. ಇದನ್ನು ಸಮರ್ಪಕವಾಗಿ ನೆನಪಿಸಿಕೊಂಡು ನೀವು ಸರಿಯಾದ ಉತ್ತರಗಳನ್ನು ಬರೆದು ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಕೆ ಮಾಡಿರಿ ಎಂದು ಶ್ರೀಗಳು ಹೇಳಿದರು.

## ಹಾವೇರಿ-ಗದಗ ಕ್ಷೇತ್ರದ ಅಭ್ಯರ್ಥಿ ಆಯ್ಕೆಗಾಗಿ ಅಭಿಪ್ರಾಯ ಸಂಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಹಾವೇರಿ ಜಿಲ್ಲಾ ಕಚೇರಿಯಲ್ಲಿ ಶುಕ್ರವಾರ ಬಿಜೆಪಿ ರಾಜ್ಯ ಅಧ್ಯಕ್ಷರು ಹಾಗೂ ಹಿರಿಯ ನಾಯಕರ ಅಪೇಕ್ಷೆಯಂತೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳ ಆಯ್ಕೆ ಕುರಿತು ಕರ್ನಾಟಕ ವಿಧಾನಸಭೆಯ ಮಾಜಿ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿ, ವಿ.ಪ ಮಾಜಿ ಸದಸ್ಯ ಸಿದ್ದರಾಜು ಬಿಜೆಪಿ ಹಾವೇರಿ ಜಿಲ್ಲಾ ಕಚೇರಿಯಲ್ಲಿ ಕ್ಷೇತ್ರದ ಮಂಡಲಗಳ ಪ್ರಮುಖರ ಅಭಿಪ್ರಾಯ ಸಂಗ್ರಹಿಸಿದರು.

ಈ ಪ್ರಕ್ರಿಯೆಯಲ್ಲಿ ಗದಗ-ಹಾವೇರಿ ಬಿಜೆಪಿ ಜಿಲ್ಲಾಧ್ಯಕ್ಷರು, ವಿಧಾನಸಭಾ ಸದಸ್ಯ ಡಾ. ಚಂದ್ರು ಲಮಾಣಿ, ವಿಧಾನಸಭಾ ಮಾಜಿ ಸದಸ್ಯರಾದ ಕೆ.ಜಿ. ಬಂಡಿ, ಬಿ.ಸಿ. ಪಾಟೀಲ, ವಿರುಪಾಕ್ಷಪ್ಪ ಬಳ್ಳಾರಿ, ಪಕ್ಷದ ಪ್ರಮುಖರಾದ ದ್ಯಾಮಣ್ಣ ಗವಿಸಿದ್ದಪ್ಪ, ಶಿವರಾಜ ಸಜ್ಜನರ ಮುಂತಾದವರು ಭಾಗವಹಿಸಿದ್ದರು.

ವಿಶೇಷವಾಗಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರಕ್ಕೆ ಯಾರು ಅಭ್ಯರ್ಥಿಯಾಗಬಹುದೆನ್ನುವ ಬಗ್ಗೆ ಪ್ರಮುಖರಿಂದ ಅಭಿಪ್ರಾಯ ಸಂಗ್ರಹಿಸಿ, ಸಂಗ್ರಹಿಸಿದ ಅಭಿಪ್ರಾಯವನ್ನು ರಾಜ್ಯ ಅಧ್ಯಕ್ಷರಿಗೆ ಕಳುಹಿಸಿಕೊಡಲಾಗುವದೆಂದು ತಿಳಿಸಿದರು ಎಂದು ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಜಿಲ್ಲಾ ಬಿಜೆಪಿ ವಕ್ತರರಾದ ಜಿ.ಸಿ. ರೇಷ್ಮಿ ವಕೀಲಕರು ತಿಳಿಸಿದ್ದಾರೆ.

## ಪ್ರಕಾಶರಿಗೆ 'ಶ್ರೀ ಗುರು ಪುಟ್ಟರಾಜ ಶ್ರೀ ಸದ್ಭಾವನಾ' ಪುರಸ್ಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ಯುಕ್ತಿ, ಶಕ್ತಿಯ ಗುಣಗಳನ್ನು ಮೇಳೈಸಿಕೊಂಡು ಸದಾ ಕಾಯಕದಲ್ಲಿ ತೊಡಗಿ ಯಶಸ್ಸು ಹೊಂದುತ್ತಾ ಸಾಗುತ್ತಿರುವ ಅದ್ವಿತೀಯ ಪ್ರತಿಭಾ ಸಂಪನ್ಮೂಲ ವ್ಯಕ್ತಿ ಪ್ರಕಾಶ ಮಂಗಳೂರು ರಾಜ್ಯ ಮಟ್ಟದ ಅತ್ಯುತ್ತಮ ಸಂಪನ್ಮೂಲ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಸದ್ಯ ಗದಗ ಶಹರ ವಲಯದ ಕ್ಷೇತ್ರ ಸಂಪನ್ಮೂಲ ಕೇಂದ್ರದಲ್ಲಿ ಕ್ಷೇತ್ರ ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಇವರು, ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿಯಾಗಿ ಸಾವಿರಾರು ಶಿಕ್ಷಕರಿಗೆ ಅನೇಕ ಬೋಧನಾ ತಂತ್ರಗಳ ಮೂಲಕ ತರಬೇತಿಯನ್ನು ನೀಡುತ್ತಾ ಪ್ರಸಕ್ತ ವರ್ತಮಾನಕ್ಕೆ ತಕ್ಕಂತೆ ಜ್ಞಾನ ಪ್ರಸಾರದ ಮಾರ್ಗದರ್ಶನ ಮಾಡುತ್ತಾ ಶಿಕ್ಷಣ ಇಲಾಖೆಯಲ್ಲಿ ಎಲ್ಲರಿಗೂ ಮೆಚ್ಚಿನ ವ್ಯಕ್ತಿಯಾಗಿದ್ದಾರೆ.

ಶಿಕ್ಷಣ ಇಲಾಖೆಯು 2017ರಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿದೆ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಯಾಗಿ ಕನ್ನಡ ನಾಡು-ನುಡಿಯ ಸೇವೆ ಮಾಡಿದ್ದಾರೆ. ಅಲ್ಲದೆ, ವಿವಿಧ ಅಧ್ಯಾತ್ಮಿಕ, ಸಾಂಸ್ಕೃತಿಕ ಸಂಘಟನೆಗಳ ಮೂಲಕ ಸಮಾಜ ಸೇವೆ ಮಾಡುತ್ತಾ ಕ್ರಿಯಾಶೀಲ ವ್ಯಕ್ತಿ ಎನ್ನಿಸಿಕೊಂಡಿದ್ದಾರೆ. ಇವರ ಶೈಕ್ಷಣಿಕ, ಸಾಹಿತ್ಯಿಕ, ಸಾಮಾಜಿಕ ಕ್ಷೇತ್ರಗಳಲ್ಲಿನ ಸಾಧನೆ ಗುರುತಿಸಿ ಇವರಿಗೆ ಡಾ. ಎ.ಬಿ. ಹಿರೇಮಠ ಪ್ರತಿಷ್ಠಾನ ಮತ್ತು ಅಶ್ವಿನಿ ಪ್ರಕಾಶನ ಗದಗ ವತಿಯಿಂದ ರಾಜ್ಯ ಮಟ್ಟದ 'ಶ್ರೀ ಗುರು ಪುಟ್ಟರಾಜ ಶ್ರೀ ಸದ್ಭಾವನಾ' ಪ್ರಶಸ್ತಿಗೆ ಆಯ್ಕೆ ಮಾಡಿದೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಮಾರ್ಚ್ 2 ರಂದು ಈ ಕೆಳಗಿನ ಸ್ಥಳಗಳಿಗೆ ನಗರಸಭೆಯಿಂದ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 24, 26 ಉಡಚಮ್ಮನ ಗುಡಿ, ಬನ್ನಿ ಮಹಾಕಾಳಿ ಗುಡಿ ಲೈನ್, ಮಕಾನಗಲ್ಲಿ, ತೆಗ್ಗಿನ ಪ್ಲಾಟ್, ಅಬ್ಬಿಗೇರಿ ಕಾಂಪೌಂಡ್, ಸಾಲಮನೆ, ಕಮ್ಮಾರ ಸಾಲ, ಉರ್ದು ಶಾಲೆಯ ಹಿಂದಿನ ಭಾಗದ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಮೇಲಿನ ಭಾಗ- ಕೆಳಗಿನ ಭಾಗ. ವಾರ್ಡ್ ನಂ. 27 ಕಾಶಿ ವಿಶ್ವನಾಥ ನಗರ, ಹನುಮಂತ ದೇವರ ಗುಡಿ ಲೈನ್, ದುರಗಮ್ಮ ಗುಡಿ, ಅಸೂಟಿಯವರ ಲೈನ್, ಕಣವಿಯವರ ಲೈನ್, ವಿ ಆರ್ ಎಲ್ ಆಫೀಸ್ ಹಿಂದಿನ ಭಾಗ.

ವಾರ್ಡ್ ನಂ. 30 ಟಿ.ವಿ. ಎಸ್ ಶೋ ರೂಂ, ಅಬ್ಬಿಗೇರಿ ಲೇಔಟ್, ಮುತ್ತಿನ ಪೆಂಡಿಯವರ ಲೈನ್, ಪೊಲೀಸ್ ಕ್ವಾರ್ಟರ್ಸ್, ಎಸ್ ಪಿ ಆಫೀಸ್, ಪಾಶಿಯವರ ಲೈನ್, ರೋಣದವರ ಲೈನ್, ಪುಟ್ಟರಾಜ್ ನಗರ, ಕೇಶವ ನಗರ, ಸಂಕಣ್ಣವರ ಲೈನ್. ವಾರ್ಡ್ ನಂ. 31 ಹಸಿರುಕೆರೆ ದಿಬ್ಬ, ರಂಗನವಾಡ 2ನೇ ಭಾಗ, ದೇಶಪಾಂಡೆ ಲೈನ್, ಗದಗಿನವರ ಲೈನ್, ಜವಳಿ ಬಜಾರ್, ಮಾಬು ಸುಬಾನಿ ಕಟ್ಟಿ ದರ್ಗಾ ಲೈನ್.

ಅವಳಿ ನಗರದ ಸಾರ್ವಜನಿಕರಿಗೆ ಈ ಮೂಲಕ ವಿನಂತಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಫಲಾನುಭವಿ ಸಮಾವೇಶ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಮತ್ತು ಗಜೇಂದ್ರಗಡ ತಾಲೂಕು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮವನ್ನು ಮಾರ್ಚ್ 2ರಂದು ಬೆಳಿಗ್ಗೆ 11 ಗಂಟೆಗೆ ರೋಣದ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

### ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಸುವರ್ಣಾವಕಾಶ

# 'ರಾಷ್ಟ್ರೀಯ ಲೋಕ ಅದಾಲತ್' ಮಾರ್ಚ್ 9ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಾರ್ಚ್ 9ರಂದು 'ರಾಷ್ಟ್ರೀಯ ಲೋಕ ಅದಾಲತ್' ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಅವರು ತಿಳಿಸಿದರು.

ಶುಕ್ರವಾರ ಜಿಲ್ಲಾ ನ್ಯಾಯಾಲಯದ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚ್‌ನಂತೆ ಒಟ್ಟು 15 ಬೆಂಚ್‌ಗಳನ್ನು ರಚಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 19622 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 3330 ಪ್ರಕರಣಗಳನ್ನು ಗುರುತಿಸಲಾಗಿದೆ. ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ ಎಂದರು.



ಪಕ್ಷಗಾರರು ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಬಹುದಾಗಿದೆ. ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು. ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗಲಿದೆ ಎಂದು ತಿಳಿಸಿದರು.

ಕಳೆದ ಡಿಸೆಂಬರ್-2023ರಲ್ಲಿ ಜರುಗಿದ ಲೋಕ ಅದಾಲತ್‌ನಲ್ಲಿ 3718 ಚಾಲ್ತಿ ಪ್ರಕರಣಗಳನ್ನು, 7216 ವ್ಯಾಜ್ಯಪೂರ್ವ ಪ್ರಕರಣಗಳೂ ಸೇರಿ ಒಟ್ಟು 10934 ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಪಡಿಸಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಸವರಾಜ ತಿಳಿಸಿದರು.

ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಮಾರ್ಚ್ 9ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ. ಪಕ್ಷಗಾರರು ನ್ಯಾಯಾಲಯಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕೆ.ಗುರುಪ್ರಸಾದ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಮಾತನಾಡಿ, ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಈಗಾಗಲೇ ಸಂಬಂಧಪಟ್ಟ ಇಲಾಖೆಯ ಹಾಗೂ ನಿಗಮ ಮಂಡಳಿಗಳ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ಜರುಗಿಸಿ ಹೆಚ್ಚಿನ ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ತಿಳಿಯಪಡಿಸಿದೆ ಎಂದರು.

## ಹಿರಿಯ ಸಿಬ್ಬಂದಿಯ ವೃತ್ತಿ ನಿಷ್ಠೆ ಮಾದರಿಯಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ಸಿಬ್ಬಂದಿಯ ವೃತ್ತಿ ಗೌರವ, ನಿಷ್ಠೆ, ಅನುಭವ ಕಿರಿಯ ಸಿಬ್ಬಂದಿ ವರ್ಗಕ್ಕೆ ಮಾದರಿಯಾಗಿರಲಿ ಎಂದು ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘದ ಗದಗ ಜಿಲ್ಲಾ ಕಾರ್ಯಾಧ್ಯಕ್ಷ ವೆಂಕಟೇಶ್ ಡಿ.ರಾಮಗಿರಿ ನುಡಿದರು.

ಗದಗ-ಬೆಟಗೇರಿ ನಗರಸಭೆಯಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಕೆ.ಟಿ. ಯಾದವಾಡ ಅವರ ಬೀಳ್ಕೊಡುವ ಸಮಾರಂಭದಲ್ಲಿ ಮಾತನಾಡುತ್ತಾ, ಮಾತೃ ಸ್ವರೂಪರಾದ ಕೆ.ಟಿ. ಯಾದವಾಡ ತಮ್ಮ ಸೇವೆಯುದ್ದಕ್ಕೂ ಸಾಕಷ್ಟು ಒತ್ತಡ, ಸವಾಲುಗಳನ್ನು ತಾಳ್ಮೆಯಿಂದ ನಿಭಾಯಿಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದು ಬಣ್ಣಿಸಿದರು.

ಪರಿಸರ ಅಭಿಯಂತರ ಆನಂದ ಬದಿ ಹಾಗೂ ಅನಂತ ಪುಣೇಕರ ನಿವೃತ್ತರ ಸೇವೆಯನ್ನು ಕೊಂಡಾಡಿದರು. ಪೌರಾಯುಕ್ತರ ಪರವಾಗಿ ಕಾರ್ಯಾಲಯದ ವ್ಯವಸ್ಥಾಪಕ ಪರುಶುರಾಮ ಶೇರಖಾನೆ ನಿವೃತ್ತರನ್ನು ಸತ್ಕರಿಸಿ, ಗೌರವಿಸಿ, ಸರ್ವ ಸಿಬ್ಬಂದಿಯ ಅಭಿಮಾನ ನಿವೃತ್ತ ಸಿಬ್ಬಂದಿಯ ಸೇವಾ ನಿಷ್ಠೆಯನ್ನು ಗುರುತಿಸುತ್ತದೆ ಎಂದರಲ್ಲದೆ, ಅವರ ನಿವೃತ್ತ ಜೀವನ ಸುಖಕರವಾಗಿರಲೆಂದು ಶುಭ ಹಾರೈಸಿದರು. ಸಿದ್ದು ಹುಣಸಿಮರದ ಸರ್ವರನ್ನು ಸ್ವಾಗತಿಸಿ ವಂದಿಸಿದರು.

### ಶಿವಾನಂದ ಮಠದ ಭಕ್ತರ ಶಾಂತಿ ಸಭೆಯಲ್ಲಿ ಎಸ್ಪಿ ಬಿ.ಎಸ್.ನೇಮಗೌಡ


## ಶಾಂತಿ ಕದಡುವ ಪ್ರಯತ್ನ ಸರಿಯಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ಮಠದ ಹಿರಿಯ ಶ್ರೀ ಹಾಗೂ ಕಿರಿಯ ಶ್ರೀಗಳ ಮಧ್ಯೆ ಇರುವ ಉತ್ತರಾಧಿಕಾರದ ವಿವಾದ ಏನೇ ಇದ್ದರೂ ನ್ಯಾಯಾಲಯದ ಆದೇಶದಂತೆ ಕಿರಿಯ ಶ್ರೀಗಳೊಂದಿಗೆ ಶಿವರಾತ್ರಿಯಂದು ಮಠದ ಜಾತ್ರೆ ಹಾಗೂ ಇತರೆ ಕಾರ್ಯಕ್ರಮಗಳನ್ನು ನಡೆಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೂಚಿಸಿದರು.

ಶುಕ್ರವಾರ ಸಂಜೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ಉಭಯ ಶ್ರೀಗಳ ಭಕ್ತರ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ಶಿವಾನಂದ ಮಠಕ್ಕೆ ಬಹುದೊಡ್ಡ ಪರಂಪರೆಯಿದೆ. ನಾಡಿನಾದ್ಯಂತ ಅಸಂಖ್ಯಾತ ಭಕ್ತ ಸಮೂಹವಿದೆ. ಉತ್ತರಾಧಿಕಾರತ್ವ ವಿವಾದದಿಂದ ಅನಗತ್ಯವಾಗಿ ಭಕ್ತರಲ್ಲಿ ಗೊಂದಲವುಂಟಾಗಿದೆ. ಮಠ ಯಾವದೇ ಒಬ್ಬ ವ್ಯಕ್ತಿಯ ಸೊತ್ತಲ್ಲ. ಅದು ಭಕ್ತರ ಸೊತ್ತಾಗಿದೆ. ಮಠದ ಜಾತ್ರೆಯ ನೆಪದಲ್ಲಿ ಯಾವದೇ ರೀತಿಯ ಶಾಂತಿ ಕದಡುವ ಪ್ರಯತ್ನ ಸರಿಯಲ್ಲ. ಇಂತಹ ಯಾವದೇ ಪ್ರಯತ್ನ ನಡೆಸಲು ಪೊಲೀಸ್ ಇಲಾಖೆ ಅವಕಾಶ ಸಹ ನೀಡುವದಿಲ್ಲವೆಂದು ಸ್ಪಷ್ಟಪಡಿಸಿದರು.



ಶಿವರಾತ್ರಿಯಂಗವಾಗಿ ನಡೆಯುವ ಶಿವಾನಂದ ಮಠದ ಜಾತ್ರಾ ಮಹೋತ್ಸವದಲ್ಲಿ ಮಠದ ಕಿರಿಯ ಶ್ರೀ ಸದಾಶಿವಾನಂದ ಭಾರತಿ ಶ್ರೀಗಳ ಉತ್ತರಾಧಿಕಾರತ್ವಕ್ಕೆ ಯಾವದೇ ರೀತಿಯ ಧಕ್ಕೆ ಬಾರದಂತೆ ನಡೆಸುವಂತೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶಿಸಿದೆ. ಈ ಆದೇಶ ಪಾಲನೆಯನ್ನು ಮಠದ ಎರಡೂ ಬಣಗಳ ಭಕ್ತರು, ಶ್ರೀಗಳು ಪಾಲಿಸುವದು ಕಡ್ಡಾಯವಾಗಿದೆ. ಒಂದು ವೇಳೆ ಯಾವದೇ ವ್ಯಕ್ತಿ ಅಥವಾ ಬಣಗಳು ನ್ಯಾಯಾಲಯದ ಆದೇಶ ಉಲ್ಲಂಘಿಸಲು ಪ್ರಯತ್ನಸಿದ್ದೇ ಆದಲ್ಲಿ ಪೊಲೀಸ್ ಇಲಾಖೆ ಕಾನೂನು ಕ್ರಮ ಜರುಗಿಸಲಿದೆಯೆಂದು ಪೊಲೀಸ್ ವರಿಷ್ಠಾಧಿಕಾರಿಗಳು ಎಚ್ಚರಿಸಿದರು.

ಸಭೆಯಲ್ಲಿ ಡಿಎಸ್ಪಿ ಜೆ.ಎಚ್. ಇನಾಮದಾರ, ಶಹರ ಪಿಎಸ್ಐ ಎಚ್.ಕೆ. ಪಾಟೀಲ, ಸಿಪಿಐ ಡಿ.ಬಿ.ಪಾಟೀಲ, ಹಿರಿಯ ಶ್ರೀಗಳ ಪರವಾಗಿ ರಾಮಣ್ಣ ಹೊಸಮನಿ, ಶಿವಾನಂದ ನಡವಲಗುಡ್ಡ, ಎಸ್.ಕೆ. ಹನುಮಕ್ಕನವರ, ಷಡಕ್ಷರಿ ಹಿರೇಮಠ, ಬಿ.ಬಿ.ಭಾವಿಕಟ್ಟಿ, ಕಿರಿಯ ಶ್ರೀಗಳ ಭಕ್ತರ ಪರವಾಗಿ ವಿಜಯಕುಮಾರ ಗಡ್ಡಿ, ರಾಜೂ ಖಾನಪ್ಪನವರ, ಸಂತೋಷ ಕಬಾಡರ, ಮೋಹನ ಮಾಳಶೆಟ್ಟಿ, ಶಿವಾನಂದ ಪಲ್ಲೇದ, ವಿಜಯಕುಮಾರ ತೋಟರ, ಕಲ್ಲಪ್ಪ ಕೆಂಪಸಿ, ವಿರೂಪಾಕ್ಷಗೌಡ ದೇಸಾಯಿಗೌಡರ, ಈರಣ್ಣ ಬಾಳಿಕಾಯಿ, ಕುಮಾರ ತಡಕೋಡ ಮುಂತಾದವರು ಪಾಲ್ಗೊಂಡಿದ್ದರು.

### ಐಐಟಿ ಧಾರವಾಡದಲ್ಲಿ ನೂತನ ಕಟ್ಟಡ ಉದ್ಘಾಟಿಸಿದ ಉಪರಾಷ್ಟ್ರಪತಿ ಜಗದೀಪ್ ಧನಕರ್

# ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ದೊಡ್ಡದು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಂಸ್ಥೆಯ ಬೆಳವಣಿಗೆಗೆ ನೆರವು ನೀಡಲು ಭಾರತೀಯ ಕೌನ್ಸಿಲ್ ಆಫ್ ವರ್ಲ್ಡ್ ಅಫೇರ್ಸ್ ಮತ್ತು ಐಐಟಿ ಧಾರವಾಡ ನಡುವೆ ಎಂಓಯು ಸಾಧ್ಯವಾಗಿಸಲು ನಾವು ಅನುಕೂಲ ಮಾಡಿಕೊಡುತ್ತೇವೆ. ಇದು ಅಪಾರ ಸಾಧ್ಯತೆಗಳನ್ನು ಉಂಟು ಮಾಡಲಿದೆ ಎಂದು ಭಾರತದ ಉಪ ರಾಷ್ಟ್ರಪತಿಗಳಾದ ಜಗದೀಪ್ ಧನಕರ್ ನುಡಿದರು.

ಅವರು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಧಾರವಾಡ (ಐಐಟಿ ಧಾರವಾಡ)ದ ಕ್ಯಾಂಪಸ್‌ನಲ್ಲಿ ನಿರ್ಮಾಣವಾದ ಹೊಸ ಕೇಂದ್ರೀಯ ಕಲಿಕಾ ರಂಗಮಂದಿರ (ಸೆಂಟ್ರಲ್ ಲರ್ನಿಂಗ್ ಥಿಯೇಟರ್-ಸಿಎಲ್‌ಟಿ), ಜ್ಞಾನ ಸಂಪನ್ಮೂಲ-ದತ್ತಾಂಶ ಕೇಂದ್ರ (ಕೆಆರ್‌ಡಿಸಿ) ಮತ್ತು ಎರಡು ಹೊಸ ಪ್ರವೇಶ ದ್ವಾರಗಳ ಉದ್ಘಾಟನೆಯನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದರು.

ಭಾರತವು ಮುಂದಿನ ಕೆಲವು ವರ್ಷಗಳಲ್ಲಿ ಜಾಗತಿಕವಾಗಿ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲು ಸಜ್ಜಾಗಿದೆ. ಭಾರತವು ತನ್ನ ಗುರಿಗಳನ್ನು ಸಾಧಿಸಲು ಮತ್ತು 2047ರ ಹೊತ್ತಿಗೆ ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಶ್ರೇಣಿಗೆ ಸೇರುವಂತೆ ಮಾಡಲು ತಂತ್ರಜ್ಞಾನದ ಶಕ್ತಿಯನ್ನು ಬಳಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಐಐಟಿ ಧಾರವಾಡದ ನಿರ್ದೇಶಕ ಪ್ರೊ.ವೆಂಕಪ್ಪಯ್ಯ ಆರ್. ದೇಸಾಯಿ ಮಾತನಾಡಿ, ಭಾರತದ ಗೌರವಾನ್ವಿತ ಉಪ ರಾಷ್ಟ್ರಪತಿಗಳು ನಮ್ಮ ಕ್ಯಾಂಪಸ್‌ನಲ್ಲಿ ಈ ಮಹತ್ವದ ಕಟ್ಟಡಗಳು ಮತ್ತು ಸೌಲಭ್ಯಗಳನ್ನು ಉದ್ಘಾಟಿಸಿದ್ದು ಹೆಮ್ಮೆಯ ಕ್ಷಣವಾಗಿದೆ. ಐಐಟಿ ಧಾರವಾಡದಲ್ಲಿ ಸಂಪನ್ಮೂಲಗಳನ್ನು ಸೂಕ್ತವಾಗಿ ಬಳಸಿಕೊಳ್ಳುವ ಮೂಲಕ ಈ ಪ್ರದೇಶವನ್ನು ಸುಸ್ಥಿರ ಅಕ್ಷಯ ಕ್ಷೇತ್ರವನ್ನಾಗಿ ಮಾಡುವ ಗುರಿಯನ್ನು ನಾವು ಹೊಂದಿದ್ದೇವೆ ಎಂದು ಹೇಳಿದರು.

ದೇಶದ ಯುವಕರು ಪ್ರಜಾಪ್ರಭುತ್ವ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಧಾರವಾಡದ ಐಐಟಿಯಲ್ಲಿರುವ ಪ್ರತಿಭೆಗಳಿಂದಾಗಿ ಈ ಕಿರಿಯ ಐಐಟಿಯಲ್ಲಿನ ವಿದ್ಯಾರ್ಥಿಗಳು ಗಣನೀಯ ನೆರವು ಪಡೆಯುತ್ತಾರೆ. ಈ ಶ್ರೇಷ್ಠ ಕಲಿಕಾ ಕೇಂದ್ರವು ಬೆಳವಣಿಗೆ ಹೊಂದುವ ಮತ್ತು ಮುಂದಿನ ಹಂತಕ್ಕೆ ಹೋಗಲು ಬೇಕಾದ ಸಾಕಷ್ಟು ಸಾಮರ್ಥ್ಯವನ್ನು ಹೊಂದಿದೆ ಎಂದು ಜಗದೀಪ್ ಧನಕರ್ ಹೇಳಿದರು.

ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮಾತನಾಡಿ, ಧಾರವಾಡವು ಐಐಟಿ ಮತ್ತು ಐಐಐಟಿ ಉಪಸ್ಥಿತಿಯೊಂದಿಗೆ ಉನ್ನತ ಶಿಕ್ಷಣದ ಪ್ರಮುಖ ಕೇಂದ್ರವಾಗಿದೆ. ಇದು ಜಿಲ್ಲೆಯ ಕೈಗಾರಿಕಾ ಬೆಳವಣಿಗೆಗೆ ದಾರಿ ಮಾಡಿಕೊಡುತ್ತದೆ. ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳು ಕರ್ನಾಟಕದ ಉದಯೋನ್ಮುಖ ತಂತ್ರಜ್ಞಾನ ಮತ್ತು ಆರ್ಥಿಕ ಶಕ್ತಿ ಕೇಂದ್ರಗಳಲ್ಲಿ ಸೇರಿಕೊಂಡಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಭಾರತದ ದ್ವಿತೀಯ ಮಹಿಳೆ ಡಾ. ಸುದೇಶ್ ಧನಕರ್, ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೇರಿದಂತೆ ಜಿಲ್ಲೆಯ ಹಿರಿಯ ಅಧಿಕಾರಿಗಳು, ಐಐಟಿ ಧಾರವಾಡದ ವಿವಿಧ ವಿಭಾಗದ ಪ್ರಾಧ್ಯಪಕರು, ವಿದ್ಯಾರ್ಥಿಗಳು, ಸಂಶೋಧಕರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಆಕಾಶವಾಣಿಯ ಹಿರಿಯ ಉದ್ಘೋಷಕಿ ಮಾಯಾ ರಾಮನ್, ಕುಮಾರಿ ಮೇಘನಾ ಭಟ್, ಮುಕ್ತಾ ವೇದಪಾಠಕ ಅವರು ನಿರೂಪಿಸಿ, ವಂದಿಸಿದರು.

## ಪರೀಕ್ಷಾ ಕೇಂದ್ರದಲ್ಲಿ ಕೊಠಡಿಗಳ ಕೊರತೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಶುಕ್ರವಾರ ದ್ವಿತೀಯ ಪಿಯುಸಿ ಪರೀಕ್ಷೆಗಳು ಎರಡು ಕೇಂದ್ರಗಳಲ್ಲಿ ನಿರಾತಂಕವಾಗಿ ಜರುಗಿದವು. ಆದರೆ ಶಿಗ್ಲಿ ರಸ್ತೆಯಲ್ಲಿರುವ ಸರಕಾರಿ ಪದವಿಪೂರ್ವ ಕಾಲೇಜಿನ ಕೇಂದ್ರದಲ್ಲಿ ಕೊಠಡಿಗಳ ಕೊರತೆ ಕಂಡು ಬಂದಿತು.

ಈ ಪರೀಕ್ಷಾ ಕೇಂದ್ರದಲ್ಲಿ ಶುಕ್ರವಾರ 477 ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ ಮಾಡಬೇಕಾಗಿತ್ತು. ಅಂದರೆ ತಲಾ 30 ವಿದ್ಯಾರ್ಥಿಗಳಿಗೆ 1 ಕೊಠಡಿಯಂತೆ 16 ಪರೀಕ್ಷಾ ಕೊಠಡಿಗಳಲ್ಲಿ ಆಸನದ ವ್ಯವಸ್ಥೆ ಆಗಬೇಕಾಗಿತ್ತು. ಆದರೆ ಈ ಕಾಲೇಜಿನಲ್ಲಿರುವುದು ಕೇವಲ 8 ಕೊಠಡಿಗಳು ಮಾತ್ರ. ಇನ್ನೂ 8 ಕೊಠಡಿಗಳ ಕೊರತೆಯನ್ನು ಸರಿದೂಗಿಸಲು ಕೇಂದ್ರದ ಅಧೀಕ್ಷಕರು ಮತ್ತು ಅಲ್ಲಿನ ಉಪನ್ಯಾಸಕರು ಮೇಲಾಧಿಕಾರಿಗಳ ನಿರ್ದೇಶನದಂತೆ ಒಂದು ಕೊಠಡಿಯಲ್ಲಿ 30ರ ಬದಲಿಗೆ 60 ವಿದ್ಯಾರ್ಥಿಗಳು ಕುಳಿತುಕೊಳ್ಳುವಂತೆ ವ್ಯವಸ್ಥೆ ಮಾಡಿದ್ದರು.

ಇದರಿಂದ ವಿದ್ಯಾರ್ಥಿಗಳು ಸಾಕಷ್ಟು ತೊಂದರೆ ಅನುಭವಿಸುವಂತಾಯಿತು. ಕೊಠಡಿಗಳ ಕೊರತೆಯಿಂದ ಮುಂದಿನ ಎಲ್ಲ ಪರೀಕ್ಷೆಗಳನ್ನು ನಿಭಾಯಿಸುವದು ಹೇಗೆಂಬ ಚಿಂತೆ ಕಾಡುತ್ತಿದೆ. ಇಂಗ್ಲೀಷ್ ವಿಷಯಕ್ಕೆ 500 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇಲ್ಲಿರುವ ಕೊಠಡಿಗಳಷ್ಟೇ ಅಲ್ಲದೇ ಪ್ರಯೋಗಾಲಯ, ಆಡಳಿತ ಕಚೇರಿ ಬಳಸಿದರೂ ಸಾಲುವುದಿಲ್ಲ. ಇದಕ್ಕೆ ಇಲಾಖೆ ಪರ್ಯಾಯ ವ್ಯವಸ್ಥೆ ಮಾಡುವದು ಅವಶ್ಯವಾಗಿದೆ ಅಥವಾ ಮುಂದಿನ ವರ್ಷದಿಂದ ಪರೀಕ್ಷಾ ಕೇಂದ್ರಗಳ ಸಂಖ್ಯೆಯನ್ನು ಹೆಚ್ಚಿಸಲು ಇಲಾಖೆ ಚಿಂತನೆ ಮಾಡಲಿ ಎಂದು ಆಗ್ರಹಿಸಿದ ಪಾಲಕರು ಅವ್ಯವಸ್ಥೆ-ನಿರ್ಲಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka